# ತುಂಗ ಬಿಂಬ

ಸತ್ಯ ಮತ್ತು ಧೈರ್ಯದ ಧ್ವನಿ

TUNGA BIMBA | KANNADA DAILY MORNING | ಕನ್ನಡ ದಿನ ಪತ್ರಿಕೆ | RNI No: KARKAN/2023/86923

ಸಂಪುಟ: Vol: 04 | ಸಂಚಿಕೆ: Issue: 79 | ರಾಯಚೂರು Raichur 11-09-2026 | ಶುಕ್ರವಾರ Friday | ಪುಟ : Page: 04 | ಬೆಲೆ: Price: ₹ 2.00 | Postal Reg No.: RCR/L/RNP/95/2025-27


tungabimba@gmail.com

ಸಂಪಾದಕರು : ಗುರುರಾಜ ಕೆ

Editor: Gururaja K 98863 85685


**ಯಾರೂ ಊಹಿಸಲೂ ಸಾಧ್ಯವಾಗದಂತಹ ಅದ್ಭುತ ಕ್ಯಾಚ್ ಪಡೆದ ಹರ್ಮನ್‌ಪ್ರೀತ್ ಕೌರ್ ವೈರಲ್ Video; ಅಸಲಿ ಕಥೆಯೇನು?**





# ಲೈನ್ ಮೆಂಟೇನೆನ್ಸ್ ಕಾಮಗಾರಿ ಪ್ರಯುಕ್ತ ಸೆಪ್ಟಂಬರ್ 13ರಂದು ವಿದ್ಯುತ್ ವ್ಯತ್ಯಯ

ರಾಯಚೂರು ಸೆ. 10 (ಕರ್ನಾಟಕ ವಾರ್ತೆ): ಜೆಸ್ಕಾಂ ಕಾರ್ಯ ಮತ್ತು ಪಾಲನೆ ಉಪ ವಿಭಾಗ 1ರಲ್ಲಿ ವ್ಯಾಪ್ತಿಯಲ್ಲಿ ಗಣೇಶ ಹಬ್ಬದ ನಿಮಿತ್ತ ಮುಂಜಾಗ್ರತ ಕ್ರಮವಾಗಿ ಲೈನ್ ಮೆಂಟೇನೆನ್ಸ್ ಕಾಮಗಾರಿ ನಿರ್ವಹಿಸುತ್ತಿರುವ ಪ್ರಯುಕ್ತ ಸೆಪ್ಟಂಬರ್ 13ರ ಬೆಳಿಗ್ಗೆ 10ರಿಂದ ಸಂಜೆ 5ರವರೆಗೆ ಪೇಟ್ಲಾ ಬ್ರಿಡ್ಜ್, ಗಂಗಾ ನಿವಾಸ, ಕಾಸಬಾವಿ, ತೀನ್ ಕಂದೀಲ್ ಏರಿಯಾ, ಉಸ್ಮಾನಿಯಾ ಮಸ್ಜಿದ್, ಸದರ ಬಜಾರ್ ಪೊಲೀಸ್ ಸ್ಟೇಷನ್, ಅಶೋಕ್ ಡಿಪೋ, ಮಚಿಲಿ ಬಜಾರ್, ಮಂಗಳವಾರ ಪೇಟೆ, ಶೆಟ್ಟಿಬಾವಿ ಚೌಕ್, ಬಂಗಾರ ಬಜಾರ್, ಜಾಮೀಯ ಮಸ್ಜೀದ್ ಕಾಂಪ್ಲೆಕ್ಸ್, ಓಲ್ಡ್ ನೇತಾಜಿ ನಗರ ಪೊಲೀಸ್ ಸ್ಟೇಷನ್, ಪಟೇಲ್ ರೋಡ್, ಮಡ್ಡಿಪೇಟ್, ಗೀತಾ ಮಂದಿರ ರೋಡ್, ಬ್ರೇಸ್ತವಾರ ಪೇಟೆ, ಪಿಂಜರವಾಡಿ, ಗವರ್ನ್ಮೆಂಟ್ ಇನಾನಿ ಶಾಲೆ ಸೇರಿದಂತೆ ಸುತ್ತಮುತ್ತಲಿನ ಪ್ರದೇಶದಲ್ಲಿ ವಿದ್ಯುತ್ ವ್ಯತ್ಯಯವಾಗಲಿದ್ದು, ಸಾರ್ವಜನಿಕರು ಸಹಕರಿಸುವಂತೆ ಕೋರಲಾಗಿದೆ.

ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: 08532-226386, 08532-231999ಗೆ ಸಂಪರ್ಕಿಸುವತೆ ಜೆಸ್ಕಾಂ ಕಾರ್ಯ ಮತ್ತು ಪಾಲನೆ ಉಪ ವಿಭಾಗ 1ರ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅತ್ಯಾಚಾರ ಹಾಗೂ ಕೊಲೆ ಪ್ರಕರಣದ ಆರೋಪಿಗಳ ಬಂಧನ

ರಾಯಚೂರು ಸೆ. 10 (ಕರ್ನಾಟಕ ವಾರ್ತೆ): ಜಿಲ್ಲೆಯ ಸಿರವಾರ ತಾಲೂಕಿನ ಹೋಕ್ರಾಣಿ ಗ್ರಾಮದಲ್ಲಿ ದಿನಾಂಕ 19.08.2026ರ ಸಾಯಂಕಾಲ ಸುಮಾರು 07ಗಂಟೆಗೆ ಕುಮಾರಿ ಅಶ್ವಿನಿ (21) ಇವರು ಹೊಕ್ರಾಣಿ ಗ್ರಾಮದಲ್ಲಿ ಬಹಿರ್ದೆಸೆಗೆ ಹೋದಾಗ, ಅಶ್ವಿನಿಯನ್ನು ಯಾರೋ ಅಪಹರಣ ಮಾಡಿ, ಅತ್ಯಾಚಾರ ಎಸಗಿ ಹಾಗೂ ಕೊಲೆ ಮಾಡಿ ಹಾಗೂ ಹೆಣವನ್ನು ಹೊಕ್ರಾಣಿಯ ದೊಡ್ಡಾಳ ಬಾವಿಯಲ್ಲಿ ಹಾಕಿರುವುದಾಗಿ ಅಶ್ವಿನಿರವರ ತಂದೆ ತಿಮ್ಮಾರೆಡ್ಡಿರವರು ಸಿರವಾರ ಪೊಲೀಸ್ ಠಾಣೆಗೆ ನೀಡಿದ ದೂರಿನ ಮೇರೆಗೆ ಸಿರವಾರ ಪೊಲೀಸ್ ಠಾಣೆಯಲ್ಲಿ ಗುನ್ನೆ ನಂ 158/2026 ಕಲಂ: 137(2). 103(1), 70, 238 ಸಹಿತ 3(5) ಃಓ-2023 ಮತ್ತು ಕಲಂ 3(2) () ಅ/ಖಿ ಡಿಟಿಣಟಿ ಜಿ ಂಣಡಿಥಿಣ ಂಥಿಣ-1989, ಂಟಿಜಟಿಣ ಂಥಿಣ-2015ರ ಅಡಿಯಲ್ಲಿ ಪ್ರಕರಣ ದಾಖಲಾಗಿತ್ತು.

ಡಿ.ಎಸ್.ಪಿ ಸಿಂಧನೂರು ಅವರು ಆರೋಪಿ 1) ಗುಂಡ್ಯಾ ತಂದೆ ರಾಮಣ್ಣ, 36 ವರ್ಷ, ವಡ್ಡರ್ ಜನಾಂಗ, ಸಾ: ಹೊಕ್ರಾಣಿ ಈತನನ್ನು ಬಂಧಿಸಿ, ಶವದ ತನಿಖಾ ಪಂಚನಾಮೆ ಹಾಗೂ ಕೃತ್ಯ ಸ್ಥಳದ ಪಂಚನಾಮೆ ಪೂರ್ಣಗೊಳಿಸಿ, ಪ್ರಕರಣವು ಎಸ್.ಸಿ/ಎಸ್.ಟಿ ಕಾಯ್ದೆಯಡಿಯಲ್ಲಿರುವುದರಿಂದ ಪ್ರಕರಣದ ಮುಂದಿನ ತನಿಖೆಗಾಗಿ ಕಡತವನ್ನು ದಿನಾಂಕ 22.08.2026 ರಂದು ನಾಗರೀಕ ಹಕ್ಕುಗಳ ಜಾರಿ ನಿರ್ದೇಶನಾಲಯ ಪೊಲೀಸ್ ಠಾಣೆ ರಾಯಚೂರು ರವರಿಗೆ ವರ್ಗಾವಣೆ ಮಾಡಿರುತ್ತಾರೆ.

ಪ್ರಕರಣದ ಮುಂದಿನ ತನಿಖೆಯನ್ನು ಪೊಲೀಸ್ ಉಪಾಧೀಕ್ಷಕರು ನಾಗರೀಕ ಹಕ್ಕುಗಳ ಜಾರಿ ನಿರ್ದೇಶನಾಲಯ ರಾಯಚೂರು ಪೊಲೀಸ್ ಠಾಣೆ ಅವರು ಕೈಗೊಂಡು, ಡಿ.ಸಿ.ಆರ್.ಇ ವಿಭಾಗದ ಎಡಿಜಿಪಿಗಳಾದ ಪಿ.ಹರಿಶೇಖರನ್ ಅವರು ಮಾರ್ಗದರ್ಶನದಲ್ಲಿ ಪ್ರಕರಣದ ಇನ್ನಿತರ ಆರೋಪಿಗಳಾದ ಆರೋಪಿ ಸಂಖ್ಯೆ 2. ಮಹಾಂತೇಶ ವಡ್ಡರು 20 ವರ್ಷ ಸಾ: ತೊಕ್ರಾಣಿ. 3. ವಿರೇಶ 23 ವರ್ಷ, ಮಾದಿಗ ಸಾ: ಹೊಕ್ರಾಣಿ, 4. ಅಭಿಷೇಕ 24 ವರ್ಷ, ಜಂಗಮ ಜನಾಂಗ ಸಾ: ಆಫೀಪರ್ ಕಾಲೋನಿ, ರಾಯಚೂರು ನಗರ ಇವರುಗಳನ್ನು ದಿನಾಂಕ: 22.08.2026 ರಂದು ದಸ್ತಗಿರಿ ಮಾಡಿ ನ್ಯಾಯಾಂಗ ಬಂಧನಕ್ಕೆ ಕಳುಹಿಸಲಾಗಿದೆ.

ದಿನಾಂಕ 19.08.2026 ರಂದು ಕುಮಾರಿ ಅಶ್ವಿನಿರವರು ಹೊಕ್ರಾಣಿ ಗ್ರಾಮದಲ್ಲಿ ಬಹಿರ್ದೆಸೆಗೆಂದು ಬೀರಪ್ಪನ ಗುಡಿಯ ಕಡೆಗೆ ಹೋದಾಗ ಆರೋಪಿಗಳು ಅಪಹರಿಸಿ, ಅತ್ಯಾಚಾರ ಮಾಡಿ, ವಿಷಯ ಬಹಿರಂಗವಾಗದಿರಲು ಅಶ್ವಿನಿಯನ್ನು ಕೊಲೆ ಮಾಡಿರುವುದು ತನಿಖೆಯಲ್ಲಿ ತಿಳಿದು ಬಂದಿದ್ದು, ಪ್ರಕರಣದ ಮುಂದಿನ ತನಿಖೆ ಮುಂದುವರೆದಿದೆ ಎಂದು ರಾಯಚೂರಿನ ನಾಹಜಾನಿ ಪೊಲೀಸ್ ಠಾಣೆಯ ಪೊಲೀಸ್ ಉಪಾಧೀಕ್ಷಕರಾದ ರಾಜಕುಮಾರ ವಾಜಂತ್ರಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮುಷ್ಟೂರು ಗ್ರಾಮದ ಶಿಲ್ಪಾ ಆರ್. ಎಮ್ ಕಾಣೆ: ಪತ್ತೆಗೆ ಪೊಲೀಸರ ಮನವಿ



ರಾಯಚೂರು ಸೆ. 10 (ಕರ್ನಾಟಕ ವಾರ್ತೆ): ರಾಯಚೂರು ಜಿಲ್ಲೆಯ ದೇವದುರ್ಗ ತಾಲೂಕಿನ ಗಬ್ಬೂರು ಪೊಲೀಸ್ ಠಾಣೆ ವ್ಯಾಪ್ತಿಯ ಮುಷ್ಟೂರು ಗ್ರಾಮದ ಶಿಲ್ಪಾ ಆರ್.ಎಮ್ ತಂದೆ ರಂಗಪ್ಪ (20) ಎಂಬ ಯುವತಿ ರಾಯಚೂರಿನ ಎಸ್.ಕೆ.ಇ ಪ್ಯಾರಾಮೆಡಿಕಲ್ ಕಾಲೇಜಿನಲ್ಲಿ ವಿದ್ಯಾಬ್ಯಾಸ ಮಾಡುತ್ತಿದ್ದು, ಮೆನಯಿಂದ ಕಾಲೇಜಿಗೆ ಹೋಗಿ ಬರುವುದಾಗಿ ಹೇಳಿ ಹೋದವಳು ಮರಳಿ ಮನೆಗೆ ಬಾರದೆ ಕಾಣೆಯಾಗಿದ್ದು, ಈ ಕುರಿತು ಠಾಣೆಯಲ್ಲಿ ಗುನ್ನೆ ನಂ 102/2026 ಕಲಂ ಮಹಿಳೆ ಕಾಣೆ ಅಡಿ ಪ್ರಕರಣ ದಾಖಲಿಸಿಕೊಂಡು ತನಿಖೆ ಕೈಕೊಳ್ಳಲಾಗಿದೆ.

ನಂತರ ಈ ಬಗ್ಗೆ ವಿಚಾರಿಸುತ್ತಿರುವಾಗ ತಮ್ಮೂರಿನ ಗುಡದಪ್ಪ ಈತನು ತಮ್ಮ ಸಂಬಧಿಯಾದ ಎನ್.ಗಣೇಕಲ್ ಗ್ರಾಮದ ಶಿವರಾಜ ಈತನೊಂದಿಗೆ ಕಾಣೆಯಾದ ಶಿಲ್ಪಾಳು ಪ್ರೀತಿ ಮಾಡುತ್ತಿರುವ ಬಗ್ಗೆ ತಿಳಿಸಿದರು. ಆಗ ಗುಡದಪ್ಪನ ಕಡೆಯಿಂದ ಶಿವರಾಜನ ಮೊಬೈಲ್ ನಂಬರ್ ತೆಗೆದುಕೊಂಡು ಫೋನ್ ಮಾಡಿದಾಗ ಆತನ ಮೊಬೈಲ್ ಕೂಡ ಸ್ವಿಚ್ ಆಫ್ ಬಂದಿರುತ್ತದೆ.

ಕಾಣೆಯಾದ ಯುವತಿ ಚಹರೆ ಪಟ್ಟಿ: 05 ಅಡಿ ಎತ್ತರ, ಸದೃಢ ದೇಹ, ಕೆಂಪು ಮೈಬಣ್ಣ, ಸಾಧಾರಣ ಮೈಕಟ್ಟು, ಮನೆಯಿಂದ ಹೋಗುವಾಗ ಕಂದು ಬಣ್ಣದ ಚೂಡಿದಾರ ಮತ್ತು ಬಿಳಿಯ ಬಣ್ಣದ ಪ್ಯಾಂಟ್ ಧರಿಸಿರುತ್ತಾಳೆ.

ಈ ಯುವತಿ ಮಾಹಿತಿ ಸಿಕ್ಕಲ್ಲಿ ಗಬ್ಬೂರು ಠಾಣೆ ಮೊಬೈಲ್ ಸಂಖ್ಯೆ: 9480803860, ಸಿಪಿಐ ದೇವದುರ್ಗ ಮೊಬೈಲ್ ಸಂಖ್ಯೆ: 9480803835ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಠಾಣೆಯ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅಮೃತ ವಾಣಿ

ಅಂತಸ್ತು ನೋಡಿ
ಅಳೆಯಬೇಡ,
ಅಮಾಯಕರ ಮನಸ್ಸು
ನೋಯಿಸಬೇಡ.

## 1582 ನೇಯ ದಿನಕ್ಕೆ ಏಮ್ಸ್ ಹೋರಾಟ

# ಅಂಬಿಗರ ಚೌಡಯ್ಯ ಅಭಿವೃದ್ಧಿ ನಿಗಮದಿಂದ ವಿವಿಧ ಯೋಜನೆಯಡಿ ಅರ್ಜಿ ಆಹ್ವಾನ

ರಾಯಚೂರು ಸೆ.10 (ಕರ್ನಾಟಕ ವಾರ್ತೆ): ನಿಜಶರಣ ಅಂಬಿಗರ ಚೌಡಯ್ಯ ಅಭಿವೃದ್ಧಿ ನಿಗಮ ನಿಯಮಿತದಿಂದ 2026-27ನೇ ಸಾಲಿಗೆ ಅನುಷ್ಠಾನಗೊಳಿಸುತ್ತಿರುವ ವಿವಿಧ ಯೋಜನೆಗಳಿಗೆ ಅರ್ಹ ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ನಿಗಮದಿಂದ ಅರಿವು ಶೈಕ್ಷಣಿಕ ಸಾಲ ಯೋಜನೆ, ಅರಿವು ಶೈಕ್ಷಣಿಕ ಸಾಲ ಯೋಜನೆ, ವಿದೇಶಿ ವಿಶ್ವವಿದ್ಯಾಲಯಗಳಲ್ಲಿ ಉನ್ನತ ಶಿಕ್ಷಣ ವ್ಯಾಸಂಗಕ್ಕೆ ಆರ್ಥಿಕ ನೆರವು, ಸ್ವಯಂ ಉದ್ಯೋಗ ನೇರಸಾಲ ಮತ್ತು ಸಹಾಯಧನ ಯೋಜನೆಯಡಿ ಆಸಕ್ತರಿಂದ ಸೆಪ್ಟಂಬರ್ 30ರೊಳಗಾಗಿ ಅರ್ಜಿ ಸಲ್ಲಿಸಬಹುದಾಗಿದೆ.

ವಿಶೇಷ ಸೂಚನೆ:

ಅರ್ಜಿದಾರರು ತಮ್ಮ ಆಧಾರ್ಸಂಖ್ಯೆಗೆ ಮೊಬೈಲ್ ಸಂಖ್ಯೆಯನ್ನು ಜೋಡಣೆ ಮಾಡಿರಬೇಕು ಹಾಗೂ ಬ್ಯಾಂಕ್ ಖಾತೆಗೆ ಆಧಾರ್ ಸಂಖ್ಯೆಯನ್ನು ಜೋಡಣೆಯಾಗಿರಬೇಕು. ನಿಗಮವು ಅನುಷ್ಠಾನಗೊಳಿಸುವ ಯೋಜನೆಗಳಲ್ಲಿ ಸರ್ಕಾರದ ಮತ್ತು ನಿರ್ದೇಶಕ ಮಂಡಳಿ ವಿವೇಚನಾಕೋಟಾದಡಿ ಸೌಲಭ್ಯ ಪಡೆಯ ಬಯಸುವವರೂ ಸಹ ಆನ್ಲೈನ್ನಲ್ಲಿ ಅರ್ಜಿ ಸಲ್ಲಿಸುವುದು ಅಗತ್ಯವಾಗಿರುತ್ತದೆ.

ಒಂದು ಕುಟುಂಬದ ಒಬ್ಬರಿಗೆ ಮಾತ್ರ ಮೇಲ್ಕಂಡ ಯಾವುದಾದರೂ ಒಂದು ಯೋಜನೆಯಲ್ಲಿ ಸೌಲಭ್ಯ ಪಡೆಯಲು ಅರ್ಹರಿರುತ್ತಾರೆ.ಸೌಲಭ್ಯಒದಗಿಸಲಾಗುವುದು. ಅರ್ಹ ಫಲಾಪೇಕ್ಷಿಗಳು ಗ್ರಾಮ ಒನ್/ಬೆಂಗಳೂರುಒನ್/ ಕರ್ನಾಟಕಒನ್ ನಾಗರೀಕ ಸೇವಾ ಕೇಂದ್ರಗಳಲ್ಲಿ ದಾಖಲೆಗಳೊಂದಿಗೆ ಸೇವಾಸಿಂಧು ಪೋರ್ಟಲ್ ನಲ್ಲಿ ಅರ್ಜಿಗಳನ್ನು ಸಲ್ಲಿಸಬಹುದಾಗಿರುತ್ತದೆ.

ಕಳೆದ ಮೂರು ವರ್ಷದಿಂದ ಸರ್ಕಾರದ ಯಾವುದೇ ನಿಗಮ ಅಥವಾ ಇಲಾಖೆಗಳಲ್ಲಿ ಯೋಜನೆಯ ಪ್ರಯೋಜನ ಪಡೆದಿದ್ದಲ್ಲಿ ಅಂತಹವರು ಹಾಗೂ ಅವರ ಕುಟುಂಬದವರು ಮತ್ತೊಮ್ಮೆ ಸೌಲಭ್ಯ ಕೋರಿ ಅರ್ಜಿ ಸಲ್ಲಿಸಲು ಅರ್ಹರಿರುವುದಿಲ್ಲ.

ಹೆಚ್ಚಿನ ಮಾಹಿತಿಗಾಗಿ ನಿಗಮದ ಜಾಲತಾಣ http://ambigaradevelopment.karnataka.gov.in ಅಥವಾ ನಿಗಮದ ದೂರವಾಣಿ ಸಂಖ್ಯೆ 080-22864099 ಅನ್ನು ಸಂಪರ್ಕಿಸುವುದು. ಅಥವಾ ಜಿಲ್ಲಾ ವ್ಯವಸ್ಥಾಪಕರು, ಅ/ ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದ ಜಿಲ್ಲಾ ಕಛೇರಿಗಳನ್ನು ಸಂಪರ್ಕಿಸಬಹುದಾಗಿದೆ.

2024-25 ಮತ್ತು 2025-26ನೇಸಾಲಿನಲ್ಲಿ (ಸ್ವಯಂ ಉದ್ಯೋಗ ನೇರಸಾಲ ಯೋಜನೆ) ಅರ್ಜಿ ಸಲ್ಲಿಸಿರುವ ಫಲಾಪೇಕ್ಷಿಗಳು ಪುನಃ ಅರ್ಜಿ ಸಲ್ಲಿಸುವ ಅವಶ್ಯಕತೆ ಇರುವುದಿಲ್ಲ.

ಯೋಜನೆಗಳ ಮಾರ್ಗಸೂಚಿಯಲ್ಲಿ ಯಾವುದೇ ಬದಲಾವಣೆಗಳಾದಲ್ಲಿ, ಆ ದಿನಾಂಕದಿದ ಜಾರಿಗೆ ಬರುವಂತೆ ಯೋಜನೆಯನ್ನು ಜಾರಿಗೊಳಿಸಲಾಗುವುದು ಎಂದು ನಿಗಮದ ಜಿಲ್ಲಾ ವ್ಯವಸ್ಥಾಪಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಏಮ್ಸ್ ಮಂಜೂರಿಗೆ ಕೇಂದ್ರದ ಮೇಲೆ ಒತ್ತಡ ತರಲಾಗುವುದು: ಮಹಿಮಾ ಪಟೇಲ್



ರಾಯಚೂರು: ರಾಯಚೂರಿಗೆ ಏಮ್ಸ್ ಮಂಜೂರು ಮಾಡುವಂತೆ ಕೇಂದ್ರ ಸರ್ಕಾರದ ಮೇಲೆ ಒತ್ತಡ ತರಲಾಗುವುದು ಎಂದು ಜನತಾದಳ (ಯು) ರಾಜ್ಯಾಧ್ಯಕ್ಷ ಮಹಿಮಾ ಪಟೇಲ್ ಭರವಸೆ ನೀಡಿದರು.

ರಾಯಚೂರು ಜಿಲ್ಲಾ ಏಮ್ಸ್ ಹೋರಾಟ ಸಮಿತಿ ನಡೆಸುತ್ತಿರುವ ಅನಿರ್ದಿಷ್ಟ ಧರಣಿ ಸತ್ಯಾಗ್ರಹ 1582ನೇ ದಿನಕ್ಕೆ ಕಾಲಿಟ್ಟ ಸಂದರ್ಭದಲ್ಲಿ ಹೋರಾಟ ವೇದಿಕೆಗೆ ಭೇಟಿ ನೀಡಿ ಬೆಂಬಲ ವ್ಯಕ್ತಪಡಿಸಿ ಅವರು ಮಾತನಾಡಿದರು.

ಹಿಂದುಳಿದ ಹಾಗೂ ಆರೋಗ್ಯ ಸಮಸ್ಯೆಗಳಿಂದ ಬಳಲುತ್ತಿರುವ ರಾಯಚೂರು ಜಿಲ್ಲೆಗೆ ಏಮ್ಸ್ ಮಂಜೂರು ಮಾಡುವಂತೆ ದೀರ್ಘಕಾಲದಿಂದ ಹೋರಾಟ ನಡೆಯುತ್ತಿದೆ. ಹೋರಾಟದ ಫಲವಾಗಿ ರಾಜ್ಯ ಸರ್ಕಾರವೂ ರಾಯಚೂರಿನಲ್ಲಿ ಏಮ್ಸ್ ಸ್ಥಾಪಿಸುವಂತೆ ಕೇಂದ್ರಕ್ಕೆ ಶಿಫಾರಸು ಮಾಡಿದೆ. ಆದರೂ ಕೇಂದ್ರ ಸರ್ಕಾರದಿಂದ ಮಂಜೂರಾತಿಯಲ್ಲಿ ವಿಳಂಬವಾಗುತ್ತಿದೆ ಎಂದು ಅವರು ಹೇಳಿದರು.

ನಂಜುಂಡಪ್ಪ ವರದಿ ಶಿಫಾರಸಿನಂತೆ ರಾಯಚೂರಿನಲ್ಲಿ ಐಐಟಿ ಸ್ಥಾಪಿಸಬೇಕಾಗಿದ್ದರೂ ರಾಜಕೀಯ ಕಾರಣಗಳಿಂದ ಅದನ್ನು ಧಾರವಾಡದಲ್ಲಿ ಸ್ಥಾಪಿಸಿ ಜಿಲ್ಲೆಗೆ ಅನ್ಯಾಯ ಮಾಡಲಾಗಿದೆ ಎಂದು ಅವರು ಆರೋಪಿಸಿದರು. ವಿಶೇಷ ಸ್ಥಾನಮಾನ ಹೊಂದಿರುವ ಕಲ್ಯಾಣ ಕರ್ನಾಟಕ ಭಾಗದ ಪ್ರಮುಖ ಜಿಲ್ಲೆಯಾದ ರಾಯಚೂರಿಗೆ ಇನ್ನಷ್ಟು ವಿಳಂಬ ಮಾಡದೆ ಏಮ್ಸ್ ಮಂಜೂರು ಮಾಡಬೇಕು ಎಂದು ಒತ್ತಾಯಿಸಿದರು.

ಹೋರಾಟವನ್ನು ಉದ್ದೇಶಿಸಿ ವಚನ ಟಿವಿ ಸಂಪಾದಕ ಸಿದ್ದು ಯಾಪಲಪರವಿ ಹಾಗೂ ಸರ್ವೋದಯ ಮುಖಂಡ ಬಸವಲಿಂಗಪ್ಪ ಮಾತನಾಡಿದರು.

ಧರಣಿಯಲ್ಲಿ ಡಾ. ಬಸವರಾಜ ಕಳಸ, ಅಶೋಕ್ ಕುಮಾರ್ ಜೈನ್, ಭಾರದ್ವಾಜ್, ಎಸ್. ಹನುಮಂತಪ್ಪ, ಎಸ್. ತಿಮ್ಮಾರೆಡ್ಡಿ, ಜಾನ್ ವೆಸ್ಲಿ, ವೆಂಕಟರೆಡ್ಡಿ ದಿನ್ನಿ, ಡಾ. ಜಗದೀಶ್ ಪೂರತಿಪ್ಲಿ, ಎಸ್. ಮಾರಪ್ಪ ವಕೀಲರು, ಬಸವರಾಜ ಭಂಡಾರಿ, ಆಂಜನೇಯ ಕುರುಬದೊಡ್ಡಿ, ಸಾಧಿಕ್ ಖಾನ್ ಯರಗೇರಾ, ವಿನಯ್ ಕುಮಾರ್ ಚಿತ್ರಗಾರ, ವೀರಭದ್ರಯ್ಯ ಸ್ವಾಮಿ, ಶ್ರೀನಿವಾಸ್ ಜೋಶಿ, ಡಿ. ಮಹಾದೇವಪ್ಪ, ಬಸವರಾಜ ಕುರುಗೋಡ್, ವೇಣು ಜಾಲಿಬೆಂಚಿ, ಹೇಮರಾಜ್ ಅಸ್ಕಿಹಾಳ್, ಪ್ರಸನ್ನ ಆಲಂಪಲ್ಲಿ, ಜೈಭೀಮ್ ವಲ್ಲಭ, ರವೀಂದ್ರನಾಥ್ ಪಟ್ಟಿ, ನರಸಿಂಹಲು ಮರ್ಚೆಟ್ ಹಾಲ್, ತಾಯಣ್ಣ ಗರ್ದ, ಲಕ್ಷ್ಮಣ ಕಲ್ಲೂರ್, ಸೈದುದ್ದೀನ್ ಸೇರಿದಂತೆ ಹಲವರು ಭಾಗವಹಿಸಿದ್ದರು.

# ಹರಿಕಥಾಮೃತಸಾರ ಕೋಟಿ ಪಾರಾಯಣ ಸಮರ್ಪಣೆ



ಮಾನ್ವಿ: ಪಟ್ಟಣದ ಶ್ರೀ ಜಗನ್ನಾಥದಾಸರ ಸನ್ನಿಧಾನದಲ್ಲಿ ಟಿ.ಟಿ.ಡಿ. ತಿರುಮಲ ದಾಸ ಸಾಹಿತ್ಯ ಪ್ರಾಜೆಕ್ಟ್ ವತಿಯಿಂದ ಕೈಗೊಳ್ಳಲಾಗಿದ್ದ ಹರಿಕಥಾಮೃತಸಾರ ಕೃತಿಯ 32 ಸಂಧಿಗಳ ಕೋಟಿ ಪಾರಾಯಣ ಕಾರ್ಯಕ್ರಮ ಗುರುವಾರ ಸಮಾಪನಗೊಂಡಿತು.

ಟಿ.ಟಿ.ಡಿ. ತಿರುಮಲ ದಾಸ ಸಾಹಿತ್ಯ ಪ್ರಾಜೆಕ್ಟ್ ಮುಖ್ಯಸ್ಥ ಆರ್. ಆನಂದ ತೀರ್ಥಾಚಾರ್ಯ ಪಗಡಾಲ ಅವರ ನಿರ್ದೇಶನದಂತೆ ಕಳೆದ ಒಂದು ತಿಂಗಳಿನಿಂದ ಆನ್‌ಲೈನ್ ಮೂಲಕ ನಡೆದ ಕೋಟಿ ಪಾರಾಯಣದ ಮುಕ್ತಾಯದ ಅಂಗವಾಗಿ, ಕೃತಿಕಾರ ಶ್ರೀ ಜಗನ್ನಾಥದಾಸರ ಸನ್ನಿಧಿಯಲ್ಲಿ ವಿಶೇಷ ಸಮರ್ಪಣಾ ಕಾರ್ಯಕ್ರಮ ನಡೆಯಿತು.

ಹೈದರಾಬಾದ್, ಚೆನ್ನೈ, ಆಂಧ್ರಪ್ರದೇಶ ಸೇರಿದಂತೆ ವಿವಿಧ ಭಾಗಗಳಿಂದ ಆನ್‌ಲೈನ್ ಮೂಲಕ ಪಾರಾಯಣದಲ್ಲಿ ಪಾಲ್ಗೊಂಡಿದ್ದ ಸುಮಾರು 200 ಮಹಿಳಾ ಸದಸ್ಯರು ಗುರುವಾರ ಬೆಳಿಗ್ಗೆ 5 ಗಂಟೆಯಿಂದ ಹರಿಕಥಾಮೃತಸಾರದ 32 ಸಂಧಿಗಳ ಸಾಮೂಹಿಕ ಪಾರಾಯಣ ನಡೆಸಿ ಕೋಟಿ ಪಾರಾಯಣವನ್ನು ಶ್ರೀ ಜಗನ್ನಾಥದಾಸರಿಗೆ ಸಮರ್ಪಿಸಿದರು.

ಕರ್ನಾಟಕ ಭಾಗದ ಟಿ.ಟಿ.ಡಿ. ಸಂಯೋಜಕಿ ಪರಿಮಳಾ ಬೆಂಗಳೂರು ಮಾತನಾಡಿ, ಕರ್ನಾಟಕ, ಆಂಧ್ರಪ್ರದೇಶ, ತಮಿಳುನಾಡು, ಹೈದರಾಬಾದ್ ಹಾಗೂ ತಿರುಪತಿ ಸೇರಿದಂತೆ ವಿವಿಧ ಭಾಗಗಳ ಭಕ್ತರು ಕಳೆದ ಒಂದು ತಿಂಗಳಿನಿಂದ ಆನ್‌ಲೈನ್ ಮೂಲಕ ಪಾರಾಯಣ ನಡೆಸಿದ್ದಾರೆ. ಅದರ ಸಮಾಪನದ ಅಂಗವಾಗಿ ಶ್ರೀ ಜಗನ್ನಾಥದಾಸರ ಮಂದಿರದಲ್ಲಿ ಸಮರ್ಪಣಾ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದರು.

ಶ್ರೀಮಠದ ಆದೇಶದಂತೆ ದಾಸರ ಮೂಲ ಅರ್ಚಕರ ವಂಶಸ್ಥರಾದ ನಮ್ರತಾ ಆಚಾರ್ಯ ಅವರು ತಿರುಮಲ ದೇವಸ್ಥಾನ ವಿಶ್ವಸ್ಥ ಮಂಡಳಿಯಿಂದ ಕಳುಹಿಸಲಾಗಿದ್ದ ಶೇಷವಸ್ತ್ರವನ್ನು ಸಮರ್ಪಿಸಿದರು. ಇದೇ ವೇಳೆ ಟಿ.ಟಿ.ಡಿ. ಕರ್ನಾಟಕ ಭಾಗದ ಸಂಯೋಜಕಿ ಪರಿಮಳಾ ಬೆಂಗಳೂರು ಹಾಗೂ 32 ಸಂಧಿಗಳನ್ನು ಕಂಠಪಾಠದ ಮೂಲಕ ಪಾರಾಯಣ ಮಾಡಿದ ಸುಧಾ ರಘು ಅವರನ್ನು ಗೌರವಿಸಲಾಯಿತು.

ಶ್ರೀ ಜಗನ್ನಾಥದಾಸರ ಸನ್ನಿಧಾನದ ವ್ಯವಸ್ಥಾಪಕ ಶ್ರೀನಿವಾಸ ಕೊರ್ಲಹಳ್ಳಿ, ಅರ್ಚಕ ಪ್ರಲ್ಹಾದಾಚಾರ್ಯ, ವೆಂಕಟೇಶ, ಮಹಿಳಾ ಭಜನಾ ಮಂಡಳಿ ಸದಸ್ಯರು ಹಾಗೂ ಆನ್‌ಲೈನ್ ಪಾರಾಯಣದಲ್ಲಿ ಪಾಲ್ಗೊಂಡಿದ್ದ 200ಕ್ಕೂ ಹೆಚ್ಚು ಮಹಿಳೆಯರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

# ಸೆ.12-13ರಂದು ರಾಜ್ಯಮಟ್ಟದ ಮಕ್ಕಳ ಮೈತ್ರಿ



ದೇವದುರ್ಗ, ಸೆ.10: ಮಕ್ಕಳಲ್ಲಿ ಬುದ್ಧ, ಬಸವ, ಅಂಬೇಡ್ಕರ್ ಸೇರಿದಂತೆ ಮಹನೀಯರ ಚಿಂತನೆಗಳನ್ನು ಪರಿಚಯಿಸಿ ಸ್ಫೂರ್ತಿ ತುಂಬುವ ಉದ್ದೇಶದಿಂದ ಸೆ.12 ಮತ್ತು 13ರಂದು ರಾಯಚೂರಿನಲ್ಲಿ ರಾಜ್ಯಮಟ್ಟದ ಮಕ್ಕಳ ಮೈತ್ರಿ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದು ಹಿರಿಯ ಧಮ್ಮಾಚಾರಿ ಮಲ್ಲೇಶಪ್ಪ ಹುನುಗುಂದಬಾಡ ತಿಳಿಸಿದರು.

ಪಟ್ಟಣದ ಪ್ರವಾಸಿ ಮಂದಿರದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಯಚೂರಿನ ಜಂಬಲದಿನ್ನಿ ರಂಗಮಂದಿರ ಸೇರಿದಂತೆ 7 ವೇದಿಕೆಗಳಲ್ಲಿ ಕಾರ್ಯಕ್ರಮಗಳು ನಡೆಯಲಿವೆ. ಮಕ್ಕಳು ಬುದ್ಧ, ಬಸವ, ಅಂಬೇಡ್ಕರ್, ಜ್ಯೋತಿಬಾ ಫುಲೆ, ಸಾವಿತ್ರಿಬಾಯಿ ಫುಲೆ, ಕಬೀರದಾಸರು ಸೇರಿದಂತೆ ಮಹನೀಯರ ವೇಷಭೂಷಣ ಧರಿಸಿ ಅವರ ವಿಚಾರಗಳನ್ನು ಪ್ರಸ್ತುತಪಡಿಸಲಿದ್ದಾರೆ ಎಂದರು.

ಡಾ. ಬಿ.ಆರ್. ಅಂಬೇಡ್ಕರ್ ಅವರ ಧಮ್ಮ ದೀಕ್ಷೆಯ 75 ವರ್ಷಗಳ ಅಂಗವಾಗಿ ಅಕ್ಟೋಬರ್ 14, 2030ರಂದು 75 ಸಾವಿರ ಮಕ್ಕಳಿಂದ ಏಕಕಾಲಕ್ಕೆ ಬುದ್ಧವಂದನೆ ನಡೆಸುವ ಗುರಿ ಹೊಂದಲಾಗಿದೆ. ಜಿಲ್ಲೆಯಲ್ಲಿ 1,000 ಮಕ್ಕಳ ನೋಂದಣಿ ಗುರಿ ಇಟ್ಟುಕೊಂಡಿದ್ದು, ಪೋಷಕರು ಮಕ್ಕಳನ್ನು ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲು ಪ್ರೋತ್ಸಾಹಿಸಬೇಕು ಎಂದು ಮನವಿ ಮಾಡಿದರು.

ಸುದ್ದಿಗೋಷ್ಠಿಯಲ್ಲಿ ಮಹಾಂತೇಶ ಭವಾನಿ, ಮಲ್ಲಿಕಾರ್ಜುನ ಕೊತ್ತದೊಡ್ಡಿ, ಮಲ್ಲಿಕಾರ್ಜುನ ಬೊಮ್ಮನಾಳ, ರಾಹುಲ್ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಹತ್ಯೆ ಮತ್ತು ಅತ್ಯಾಚಾರ ಪ್ರಕರಣದಲ್ಲಿ ನೊಂದ ಕುಟುಂಬಗಳಿಗೆ ನಮ್ಮ ನಿಗಮದಿಂದ ನೆರವು: ಜಿ.ಎಸ್. ಮಂಜುನಾಥ್



ರಾಯಚೂರು. ಸೆ. 10.(ಕರ್ನಾಟಕ ವಾರ್ತೆ): ಜಿಲ್ಲೆಯಲ್ಲಿ ನಡೆದಿರುವ ಹತ್ಯೆ ಹಾಗೂ ಅತ್ಯಾಚಾರ ಪ್ರಕರಣಗಳಲ್ಲಿ ನೊಂದ ಕುಟುಂಬಗಳಿಗೆ ನೆರವು ನೀಡಲು ನಮ್ಮ ಆದಿಜಾಂಬವ ಅಭಿವೃದ್ಧಿ ನಿಗಮದಿಂದ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ ಎಂದು ಕರ್ನಾಟಕ ಆದಿಜಾಂಬವ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಜಿ.ಎಸ್. ಮಂಜುನಾಥ್ ಹೇಳಿದರು.

ಅವರು ಗುರುವಾರ ರಾಯಚೂರು ಜಿಲ್ಲಾಧಿಕಾರಿಗಳ ಕಛೇರಿ ಸಭಾಂಗಣದಲ್ಲಿ ಕರೆದ ಪತ್ರಿಕಾಗೋಷ್ಠಿಯಲ್ಲಿ ಮಾಧ್ಯಮ ಪ್ರತಿನಿಧಿಗಳಿಗೆ ಮಾಹಿತಿ ನೀಡಿ ಮಾತನಾಡಿದರು.

ದೇವದುರ್ಗ ತಾಲ್ಲೂಕಿನ ಹದ್ದಿನಾಳ ಗ್ರಾಮದಲ್ಲಿ ವೈಯಕ್ತಿಕ ದ್ವೇಷದ ಹಿನ್ನೆಲೆಯಲ್ಲಿ ಮಾದಿಗ ಸಮುದಾಯದ ಸುಮಾರು 37 ವರ್ಷದ ಭೂಮಾನಂದ ಎಂಬ ಯುವಕನನ್ನು ಬರ್ಬರವಾಗಿ ಹತ್ಯೆ ಮಾಡಲಾಗಿದೆ. ಈ ಪ್ರಕರಣದಲ್ಲಿ ಭೂಮಾನಂದ ಅವರ ಕುಟುಂಬಕ್ಕೆ ನೆರವು ನೀಡುವ ಉದ್ದೇಶದಿಂದ ಅವರ ಧರ್ಮಪತ್ನಿ ಗೌರಮ್ಮ ಅವರಿಗೆ ಎರಡು ಎಕರೆ ಜಮೀನು ಹಾಗೂ ಬೋರ್‌ವೆಲ್ ಒದಗಿಸಲು ನಿಗಮದಿಂದ ತೀರ್ಮಾನಿಸಲಾಗಿದೆ ಎಂದು ಹೇಳಿದರು.

ಇವರ ಕುಟುಂಬಕ್ಕೆ ಕಳೆದ ವಾರ ಸಮಾಜ ಕಲ್ಯಾಣ ಇಲಾಖೆ ಸಚಿವರು ಭೇಟಿ ನೀಡಿರುವ ಕುರಿತು ತಮ್ಮ ಗಮನಕ್ಕೆ ತಂದಿದ್ದು, ಜಿಲ್ಲಾಧಿಕಾರಿಗಳಿಗೆ ಎರಡು ಎಕರೆ ಜಮೀನು ಮಂಜೂರು ಮಾಡುವ ಪ್ರಕ್ರಿಯೆಯನ್ನು ಶೀಘ್ರವಾಗಿ ಪೂರ್ಣಗೊಳಿಸುವಂತೆ ಸೂಚಿಸಲಾಗಿದೆ. ಜಮೀನು ಮಂಜೂರಾದ ತಕ್ಷಣ ಬೋರ್‌ವೆಲ್‌ಗಾಗಿ ಅಗತ್ಯ ಅನುದಾನ ಬಿಡುಗಡೆ ಮಾಡಲು ನಿಗಮದಿಂದ ಕ್ರಮ ಕೈಗೊಳ್ಳಲಾಗುವುದು ಎಂದರು.

ಭೂಮಾನಂದ ಅವರ ಕುಟುಂಬಕ್ಕೆ ಸಮಾಜ ಕಲ್ಯಾಣ ಇಲಾಖೆಯಿಂದ ಈಗಾಗಲೇ ಪರಿಹಾರಧನ ನೀಡಲಾಗಿದ್ದು, ಹೆಚ್ಚುವರಿ ಪರಿಹಾರ ಧನವನ್ನು ಅವರ ಮೂವರು ಮಕ್ಕಳ ಹೆಸರಿನಲ್ಲಿ ಎಫ್‌ಡಿ (ಸ್ಥಿರ ಠೇವಣಿ) ರೂಪದಲ್ಲಿ ಇರಿಸುವಂತೆ ತಾಯಿಗೆ ಸಲಹೆ ನೀಡಲಾಗಿದೆ. ಇದರಿಂದ ಅವರ ಮಕ್ಕಳ ಭವಿಷ್ಯದ ಶಿಕ್ಷಣ ಹಾಗೂ ಜೀವನ ನಿರ್ವಹಣೆಗೆ ಆರ್ಥಿಕ ಭದ್ರತೆ ದೊರೆಯಲಿದೆ ಎಂದು ತಿಳಿಸಿದರು.

ಇದೇ ವೇಳೆ ಲಿಂಗಸುಗೂರು ತಾಲ್ಲೂಕಿನ ಕರಡಕಲ್ ಗ್ರಾಮದಲ್ಲಿ ರಾಣಿಮ್ಮ ಎಂಬ ಮಹಿಳೆಯ ಮೇಲೆ ಅತ್ಯಾಚಾರ ನಡೆಸಿ ಹತ್ಯೆ ಮಾಡಿರುವ ಪ್ರಕರಣದಲ್ಲಿಯೂ ನೊಂದ ಕುಟುಂಬಕ್ಕೆ ನೆರವು ನೀಡಲು ಕ್ರಮ ಕೈಗೊಳ್ಳಲಾಗಿದೆ. ರಾಣಿಮ್ಮ ಅವರ ಪತಿ ತಿಪ್ಪಣ್ಣ ಅವರಿಗೆ ಎರಡು ಎಕರೆ ಜಮೀನು ಹಾಗೂ ಬೋರ್‌ವೆಲ್ ಒದಗಿಸಲು ತೀರ್ಮಾನಿಸಲಾಗಿದೆ ಎಂದು ಅಧ್ಯಕ್ಷರು ಹೇಳಿದರು.

ರಾಣಿಮ್ಮ ಅವರ ಮಕ್ಕಳಾದ ಸುಜಾತಾ ಮತ್ತು ಪ್ರಸನ್ನ ಅವರು ಹೆಚ್ಚಿನ ಶಿಕ್ಷಣ ಪಡೆದಿಲ್ಲ. ಅತ್ಯಾಚಾರ ಮತ್ತು ಕೊಲೆ ಪ್ರಕರಣಗಳಲ್ಲಿ ನೊಂದ ಕುಟುಂಬದ ಸದಸ್ಯರಿಗೆ ಅನುಕಂಪದ ಆಧಾರದ ಮೇಲೆ ಸರ್ಕಾರಿ ಉದ್ಯೋಗ ನೀಡುವ ಅವಕಾಶವಿದ್ದು, ಈ ಕುರಿತು ಸಮಾಜ ಕಲ್ಯಾಣ ಸಚಿವರು ಅಗತ್ಯ ಕ್ರಮ ಕೈಗೊಳ್ಳುತ್ತಿದ್ದಾರೆ. ಆದರೆ ಸರ್ಕಾರಿ ಉದ್ಯೋಗಕ್ಕೆ ಅಗತ್ಯವಾದ ಶೈಕ್ಷಣಿಕ ಅರ್ಹತೆ ಇಲ್ಲದಿರುವುದರಿಂದ ಸರ್ಕಾರ ಈ ಬಗ್ಗೆ ಸೂಕ್ತ ತೀರ್ಮಾನ ಕೈಗೊಳ್ಳಲಿದೆ ಎಂದು ಹೇಳಿದರು.

ಭೂಮಾನಂದ ಅವರ ಸಹೋದರರಿಗೂ ನಿಗಮದ ನಿಯಮಾನುಸಾರ ನೆರವು ನೀಡಲು ತೀರ್ಮಾನಿಸಲಾಗಿದೆ. ಬೆಂಗಳೂರಿನಲ್ಲಿ ವಾಸಿಸುತ್ತಿರುವ ಅವರ ಮೂವರು ಸಹೋದರರಿಗೆ ತಲಾ ಒಂದು ವಾಹನ ನೀಡಲು ನಿರ್ಧರಿಸಲಾಗಿದ್ದು, ಚಾಲನಾ ಪರವಾನಗಿ ಹೊಂದಿರುವವರಿಗೆ ವಾಹನ ಒದಗಿಸುವುದು ಸೇರಿದಂತೆ ಅಗತ್ಯ ಕ್ರಮ ಕೈಗೊಳ್ಳಲಾಗುತ್ತಿದೆ ಎಂದರು.

ಇದೇ ವೇಳೆ ಮತ್ತೊಂದು ಪ್ರಕರಣದಲ್ಲಿ ಅಶ್ವಿನಿ ಅವರ ಕುಟುಂಬಕ್ಕೂ ನೆರವು ನೀಡಲು ಕ್ರಮ ಕೈಗೊಳ್ಳಲಾಗುತ್ತಿದೆ. ಈ ಪ್ರಕರಣವು ಚಲುವಾದಿ ಸಮುದಾಯಕ್ಕೆ ಸಂಬಂಧಿಸಿದ್ದಾಗಿದ್ದು, ಅಂಬೇಡ್ಕರ್ ಅಭಿವೃದ್ಧಿ ನಿಗಮದ ಅಧ್ಯಕ್ಷರೂ ತಮ್ಮನ್ನು ಸಂಪರ್ಕಿಸಿ ಕುಟುಂಬಕ್ಕೆ ಎರಡು ಎಕರೆ ಜಮೀನು ಒದಗಿಸುವ ಕುರಿತು ಚರ್ಚಿಸಿದ್ದಾರೆ. ಈ ನಿಟ್ಟಿನಲ್ಲಿ ಅಗತ್ಯ ಸಹಕಾರ ನೀಡುವುದಾಗಿ ತಿಳಿಸಲಾಗಿದೆ ಎಂದರು.

ಜಿಲ್ಲೆಯಲ್ಲಿ ಭೂಮಾನಂದ ಅವರ ಹತ್ಯೆ, ರಾಣಿಮ್ಮ ಅವರ ಅತ್ಯಾಚಾರ ಮತ್ತು ಹತ್ಯೆ ಹಾಗೂ ಅಶ್ವಿನಿ ಅವರ ಮೇಲಿನ ಸಾಮೂಹಿಕ ಅತ್ಯಾಚಾರ ಪ್ರಕರಣಗಳಂತಹ ಘಟನೆಗಳಿಂದ ನೊಂದ ಕುಟುಂಬಗಳಿಗೆ ಸರ್ಕಾರದ ವಿವಿಧ ಇಲಾಖೆಗಳು ಹಾಗೂ ಅಭಿವೃದ್ಧಿ ನಿಗಮಗಳ ಮೂಲಕ ಸಾಧ್ಯವಾದಷ್ಟು ಎಲ್ಲಾ ರೀತಿಯಲ್ಲಿ ನೆರವು ಒದಗಿಸಲಾಗುತ್ತಿದೆ ಎಂದು ಕರ್ನಾಟಕ ಆದಿಜಾಂಬವ ಅಭಿವೃದ್ಧಿ ನಿಗಮದ ಅಧ್ಯಕ್ಷ ಜಿ.ಎಸ್. ಮಂಜುನಾಥ್ ತಿಳಿಸಿದರು.

ಈ ಸಂದರ್ಭದಲ್ಲಿ ಕರ್ನಾಟಕ ಆದಿಜಾಂಬವ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕರಾದ ರಾಜೇಂದ್ರ ಜಲ್ದಾರ್, ವರ್ತಾ ಇಲಾಖೆಯ ಹಿರಿಯ ಸಹಾಯಕ ನಿರ್ದೇಶಕರಾದ ಸುರೇಶ. ಜಿ. ಸೇರಿದಂತೆ ಇತರೆ ವಿವಿಧ ಇಲಾಖೆಯ ಅಧಿಕಾರಿಗಳು. ಸಮಾಜದ ಮುಖಂಡರು ಉಪಸ್ಥಿತರಿದ್ದರು.

# ಗೌರಿ-ಗಣೇಶ ಹಬ್ಬವನ್ನು ಶಾಂತಿ, ಸೌಹಾರ್ದತೆಯಿಂದ ಆಚರಿಸಿ: ಎಸ್ಪಿ ಅರುಣಾಂಗ್ಷು ಗಿರಿ



ಕವಿತಾಳ: ಭಾವೈಕ್ಯತೆ ಹಾಗೂ ಸಂಭ್ರಮದ ಪ್ರತೀಕವಾದ ಶ್ರೀ ಗೌರಿ-ಗಣೇಶ ಹಬ್ಬವನ್ನು ಸಾರ್ವಜನಿಕರು ಯಾವುದೇ ಗೊಂದಲ ಅಥವಾ ಅಹಿತಕರ ಘಟನೆಗಳಿಗೆ ಅವಕಾಶ ನೀಡದೆ ಶಾಂತಿ ಮತ್ತು ಸೌಹಾರ್ದತೆಯಿಂದ ಆಚರಿಸಬೇಕು ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅರುಣಾಂಗ್ಷು ಗಿರಿ ಕರೆ ನೀಡಿದರು.

ಕವಿತಾಳ ಪೊಲೀಸ್ ಠಾಣಾ ಆವರಣದಲ್ಲಿ ಬುಧವಾರ ಹಮ್ಮಿಕೊಂಡಿದ್ದ ಗೌರಿ-ಗಣೇಶ ಹಬ್ಬದ ಪೂರ್ವಭಾವಿ ಶಾಂತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಹಬ್ಬದ ವೇಳೆ ಕಾನೂನು-ಸುವ್ಯವಸ್ಥೆ ಕಾಪಾಡುವುದು ಎಲ್ಲರ ಹೊಣೆಗಾರಿಕೆಯಾಗಿದೆ ಎಂದರು.

ಗಣೇಶ ಮೂರ್ತಿ ಪ್ರತಿಷ್ಠಾಪನೆಗೆ ಪೊಲೀಸ್, ಕಂದಾಯ, ಜೆಸ್ಕಾಂ ಹಾಗೂ ಸ್ಥಳೀಯ ಆಡಳಿತದಿಂದ ಅಗತ್ಯ ಅನುಮತಿ ಪಡೆಯಬೇಕು. ವಿಸರ್ಜನಾ ಮೆರವಣಿಗೆ ವೇಳೆ ಸರ್ಕಾರ ನಿಗದಿಪಡಿಸಿರುವ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು. ಮಿತಿಗಿಂತ ಅಧಿಕ ಶಬ್ದ ಹೊರಹೊಮ್ಮಿಸುವ ಡಿಜೆ ಬಳಕೆಗೆ ಅವಕಾಶ ಇರುವುದಿಲ್ಲ ಎಂದು ತಿಳಿಸಿದರು.

ಸಾಮಾಜಿಕ ಜಾಲತಾಣಗಳಲ್ಲಿ ಹರಡುವ ಸುಳ್ಳು ವದಂತಿಗಳಿಗೆ ಸಾರ್ವಜನಿಕರು ಕಿವಿಗೊಡಬಾರದು. ಯಾವುದೇ ಅನುಮಾನಾಸ್ಪದ ಅಥವಾ ಪ್ರಚೋದನಕಾರಿ ಮಾಹಿತಿ ಕಂಡುಬಂದಲ್ಲಿ ತಕ್ಷಣ ಪೊಲೀಸರಿಗೆ ಮಾಹಿತಿ ನೀಡಬೇಕು. ಹಬ್ಬದ ಸಂದರ್ಭದಲ್ಲಿ ಶಾಂತಿ ಕಾಪಾಡಲು ಸಾರ್ವಜನಿಕರು ಪೊಲೀಸ್ ಇಲಾಖೆಯೊಂದಿಗೆ ಸಹಕರಿಸಬೇಕು ಎಂದು ಮನವಿ ಮಾಡಿದರು.

ಮಾಜಿ ಜಿಲ್ಲಾ ಪಂಚಾಯಿತಿ ಸದಸ್ಯ ಕಿರಿಲಿಂಗಪ್ಪ ಮಾತನಾಡಿ, ಕವಿತಾಳ ಗ್ರಾಮವು ಸೌಹಾರ್ದತೆಯ ಪರಂಪರೆಯನ್ನು ಹೊಂದಿದ್ದು, ಎಲ್ಲ ಸಮುದಾಯದವರು ಒಗ್ಗೂಡಿ ಸಾಂಪ್ರದಾಯಿಕವಾಗಿ ಹಬ್ಬ ಆಚರಿಸಬೇಕು ಎಂದರು. ಸಾರ್ವಜನಿಕರಿಗೆ ತೊಂದರೆಯಾಗದಂತೆ ಹಬ್ಬದ ದಿನಗಳಲ್ಲಿ ಸೂಕ್ತ ಪೊಲೀಸ್ ಬಂದೋಬಸ್ತ್ ಕಲ್ಪಿಸಬೇಕು ಎಂದು ಮನವಿ ಮಾಡಿದರು.

ತುರುಮಂಡೆಪ್ಪ ಕಟ್ಟಿಮನಿ ಮಾತನಾಡಿ, ಉತ್ಸವ ಸಮಿತಿ ಸದಸ್ಯರು ಮತ್ತು ಯುವಕರು ಸಂಯಮದಿಂದ ವರ್ತಿಸಬೇಕು. ಸಣ್ಣಪುಟ್ಟ ವಿಚಾರಗಳಿಗೆ ವಿವಾದ ಉಂಟಾಗದಂತೆ ಜಾಗ್ರತೆ ವಹಿಸಿ, ಪರಸ್ಪರ ವಿಶ್ವಾಸ ಹಾಗೂ ಸಹಕಾರದೊಂದಿಗೆ ಹಬ್ಬ ಆಚರಿಸಬೇಕು ಎಂದು ಹೇಳಿದರು.

ಸಭೆಯಲ್ಲಿ ಸಿರವಾರ ತಹಶೀಲ್ದಾರ್ ಅಶೋಕ್ ಪರ್ವ, ಸಿಂಧನೂರು ಡಿವೈಎಸ್ಪಿ ಚಂದ್ರಶೇಖರ ನಾಯಕ, ಸಿರವಾರ ಸಿಪಿಐ ಶಶಿಕಾಂತ್ ಎಂ., ಕವಿತಾಳ ಠಾಣೆಯ ಪಿಎಸ್‌ಐ ಅಜ್ಮೀರ್, ಜೆಸ್ಕಾಂ ಎಇಇ, ಕವಿತಾಳ ಜೆಇ ಜಲಾಲ, ಸ್ಥಳೀಯ ಮುಖಂಡರಾದ ತಿಪ್ಪಯ್ಯಸ್ವಾಮಿ, ಮಲ್ಲಿಕಾರ್ಜುನಗೌಡ, ಯಾಕೋಬ ಕಡತಲ್, ಅರಳಪ್ಪ ತುಪ್ಪದೂರು, ಹುಚ್ಚಪ್ಪ ಬುಳ್ಳಾಪುರು, ಹನುಮಂತ ಭೋವಿ, ಖಾಜಿ ಸೈಯದ್ ಶಂಶುದ್ದೀನ್, ಯಮನೂರು, ಅಕ್ಬರ್ ಸಾಬ್, ಪಾತಾಪುರ ಶಿವರಾಜ ಭೋವಿ, ರಮೇಶ ಇರಬಗೇರ, ನಾರಾಯಣ ಸಿಂಗ್, ವೀರೇಶ ಹಿರೇಮಠ, ತಾಯಣ್ಣ ಯಾದವ್, ವೆಂಕಟೇಶ, ಅಂಬಣ್ಣ, ಪರಮಣ್ಣ, ಮುನೇಶ್, ಸುರೇಶ ಸೇರಿದಂತೆ ಪೊಲೀಸ್ ಸಿಬ್ಬಂದಿ, ಶಾಂತಿ ಸಮಿತಿ ಪದಾಧಿಕಾರಿಗಳು, ವಿವಿಧ ಸಂಘಟನೆಗಳ ಪ್ರಮುಖರು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

# ಕಾಲುವೆ ನೀರು ಕೆಳಭಾಗದ ರೈತರ ಜಮೀನುಗಳಿಗೆ ತಲುಪುವಂತೆ ಕ್ರಮ ಕೈಗೊಳ್ಳಿ: ಡಿಸಿ ಪೂವಿತಾ ಎಸ್.




ರಾಯಚೂರು: ಜಿಲ್ಲಾಧಿಕಾರಿ ಪೂವಿತಾ ಎಸ್. ಅವರು ಸೆ.10ರಂದು ಮೈಲ್ 47 ಗೇಟ್‌ಗೆ ಭೇಟಿ ನೀಡಿ ಪರಿಶೀಲನೆ ನಡೆಸಿದ ಬಳಿಕ ಸಿಂಧನೂರು, ಹಂಚಿನಾಳ, ತುರವಿಹಾಳ ಸೇರಿದಂತೆ ವಿವಿಧ ಪ್ರದೇಶಗಳ ಕಾಲುವೆಗಳನ್ನು ವೀಕ್ಷಿಸಿದರು.

ಈ ವೇಳೆ ನೀರು ಅನಧಿಕೃತವಾಗಿ ಪೋಲಾಗದಂತೆ ಕಟ್ಟುನಿಟ್ಟಿನ ನಿಗಾ ವಹಿಸಬೇಕು. ಕಾಲುವೆಗಳಲ್ಲಿ ನಿಗದಿತ ಗೇಜ್ ಪ್ರಕಾರ ನೀರಿನ ಹರಿವು ನಿರ್ವಹಿಸಿ, ಕೆಳಭಾಗದ ರೈತರ ಜಮೀನುಗಳಿಗೆ ಸಮರ್ಪಕವಾಗಿ ನೀರು ತಲುಪುವಂತೆ ಕ್ರಮ ಕೈಗೊಳ್ಳಬೇಕು ಎಂದು ಸಂಬಂಧಪಟ್ಟ ಇಲಾಖೆಯ ಅಧಿಕಾರಿಗಳಿಗೆ ಸೂಚಿಸಿದರು.

ಅನಧಿಕೃತವಾಗಿ ಕೆರೆಗಳಿಗೆ ನೀರು ಹರಿಸುವುದು ಅಥವಾ ನೀರನ್ನು ಬೇರೆಡೆಗೆ ತಿರುಗಿಸುವ ಪ್ರಕರಣಗಳು ಕಂಡುಬಂದಲ್ಲಿ ತಕ್ಷಣ ಸಂಬಂಧಪಟ್ಟವರ ವಿರುದ್ಧ ಪ್ರಕರಣ ದಾಖಲಿಸಿ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಜಿಲ್ಲಾಧಿಕಾರಿಗಳು ನಿರ್ದೇಶನ ನೀಡಿದರು.

ಕಾಲುವೆ ನೀರಿನ ಹಂಚಿಕೆಯಲ್ಲಿ ಯಾವುದೇ ಅಸಮತೋಲನ ಉಂಟಾಗದಂತೆ ಅಧಿಕಾರಿಗಳು ನಿರಂತರವಾಗಿ ಪರಿಶೀಲನೆ ನಡೆಸಿ, ಕೊನೆಯ ಭಾಗದ ರೈತರಿಗೆ ನೀರು ತಲುಪುವುದನ್ನು ಖಚಿತಪಡಿಸಿಕೊಳ್ಳಬೇಕು ಎಂದು ಸೂಚಿಸಿದರು.

ಈ ಸಂದರ್ಭದಲ್ಲಿ ಲಿಂಗಸುಗೂರು ಸಹಾಯಕ ಆಯುಕ್ತರು, ಸಿಂಧನೂರು ಹಾಗೂ ಮಸ್ಕಿ ತಹಶೀಲ್ದಾರರು, ನೀರಾವರಿ ಮತ್ತು ಪೊಲೀಸ್ ಇಲಾಖೆಯ ಅಧಿಕಾರಿಗಳು ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಮೃತ ಭೂಮಾನಂದ ಕುಟುಂಬಕ್ಕೆ ಸರಕಾರದಿಂದ ಎಲ್ಲಾ ರೀತಿಯ ನೆರವು ಒದಗಿಸಲು ಕ್ರಮ: ಜಿ.ಎಸ್.ಮಂಜುನಾಥ



ರಾಯಚೂರು ಸೆ. 10 (ಕರ್ನಾಟಕ ವಾರ್ತೆ): ರಾಯಚೂರು ಜಿಲ್ಲೆಯ ದೇವದುರ್ಗ ತಾಲೂಕಿನ ಹದ್ದಿನಾಳ ಗ್ರಾಮದ ಭೂಮಾನಂದ ಹದ್ದಿನಾಳ ಅವರನ್ನು ಇತ್ತೀಚೆಗೆ ಸುಂಕೇಶ್ವರಹಾಳ ಗ್ರಾಮದ ಬಳಿ ದುಷ್ಕರ್ಮಿಗಳು ಮಾರಕಾಸ್ತ್ರಗಳಿಂದ ಬರ್ಬರವಾಗಿ ಕೊಲೆ ಮಾಡಿದ ಹಿನ್ನೆಲೆಯಲ್ಲಿ ಸೆಪ್ಟೆಂಬರ್ 10ರ ಗುರುವಾರ ಅಂದು ಕರ್ನಾಟಕ ಆದಿಜಾಂಬವ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಜಿ.ಎಸ್.ಮಂಜುನಾಥ ಅವರು ಭೇಟಿ ನೀಡಿ, ಕುಟುಂಬಕ್ಕೆ ಸಾಂತ್ವನ ಹೇಳಿದರು.

ಈ ವೇಳೆ ನಿಗಮದ ಅಧ್ಯಕ್ಷರಾದ ಜಿ. ಎಸ್. ಮಂಜುನಾಥ ಅವರು ಮಾತನಾಡಿ, ಕೊಲೆಯಾದ ಸಂತ್ರಸ್ತ ವ್ಯಕ್ತಿಯ ಕುಟುಂಬಕ್ಕೆ ಹಾಗೂ ಅವರ ಮೇಲೆ ಅವಲಂಬಿತರಾಗಿರುವ ಕುಟುಂಬದ ಎಲ್ಲರಿಗೂ ಸರ್ಕಾರದಿಂದ ಮತ್ತು ನಿಗಮದಿಂದ ಸಿಗಬೇಕಾದ ಎಲ್ಲಾ ರೀತಿಯ ಸೌಲಭ್ಯಗಳನ್ನು ಒದಗಿಸಲು ಕ್ರಮ ವಹಿಸಲಾಗಿದೆ ಎಂದರು.

ಸತ್ರಸ್ತ ಕುಟುಂಬದವರು ಸಲ್ಲಿಸಿರುವ ಮನವಿಯಂತೆ ಅವರಿಗೆ ಅಗತ್ಯವಿರುವ ಎಲ್ಲಾ ನೆರವು ನೀಡಲು ನಿರ್ಧಾರಗಳನ್ನು ತೆಗೆದುಕೊಳ್ಳಲಾಗಿದೆ. ಸಂತ್ರಸ್ತರ ಮೂವರು ಹೆಣ್ಣುಮಕ್ಕಳ ಭವಿಷ್ಯವನ್ನು ಗಮನದಲ್ಲಿಟ್ಟುಕೊಂಡು, ಅವರನ್ನು ವಸತಿ ಶಾಲೆಗಳಲ್ಲಿ ಸೇರಿಸಿ ಪಿಯುಸಿ ವರೆಗೆ ಸಂಪೂರ್ಣ ಉಚಿತ ಶಿಕ್ಷಣವನ್ನು ನೀಡಲು ನಿಗಮದ ವತಿಯಿಂದ ಕ್ರಮ ಕೈಗೊಳ್ಳಲಾಗುತ್ತದೆ ಎಂದರು.

ಸತ್ರಸ್ತರ ಹೆಂಡತಿಯ ಆರ್ಥಿಕ ಸ್ಥಿತಿಯನ್ನು ಸುಧಾರಿಸಲು ಜಮೀನು ನೀಡಲು ವ್ಯವಸ್ಥೆ ಮಾಡಲಾಗುವುದು. ಹಾಗೆಯೇ ಕಾರು ಮತ್ತು ಹಾಲೋ ಬ್ಲಾಕ್ಸ್ ಫ್ಯಾಕ್ಟರಿಗೆ ಬೆಂಬಲ ಕೋರಿ ಸಲ್ಲಿಸಿರುವ ಅರ್ಜಿಗೂ ಸೌಲಭ್ಯ ಕಲ್ಪಿಸಲಾಗುವುದು. ಸಂತ್ರಸ್ತರ ನಾಲ್ಕು ಜನ ಸಹೋದರರ ಆರ್ಥಿಕ ಸ್ಥಿತಿಯನ್ನು ಗಮನಿಸಿದ್ದು ಅವರಿಗೆ ನಿಗಮದಿಂದ ತಲಾ ಒಬ್ಬರಂತೆ ಎಲ್ಲರಿಗೂ ಆರ್ಥಿಕ ನೆರವು ನೀಡಲು ಕ್ರಮ ಕೈಗೊಳ್ಳಲಾಗುವುದು ಎಂದರು.

ಸತ್ರಸ್ತ ಕುಟುಂಬಕ್ಕೆ ಲಿಡ್ಕರ್ ಸಂಸ್ಥೆಯ ವತಿಯಿಂದ ಮನೆ ಒದಗಿಸಲು ನಿರ್ಧರಿಸಲಾಗಿದ್ದು, ಈ ಕುರಿತು ಅಧ್ಯಕ್ಷರೊಂದಿಗೆ ಮಾತುಕತೆ ನಡೆಸಲಾಗಿದೆ. ಸಂಪೂರ್ಣ ವರದಿ ತರಿಸಿಕೊಂಡು ಶೀಘ್ರವೇ ಮನೆ ಮಂಜೂರು ಮಾಡಲಾಗುವುದು. ಸಂತ್ರಸ್ತರ ಕುಟುಂಬಕ್ಕೆ ಸೂಕ್ತ ನ್ಯಾಯ ದೊರಕಿಸಿಕೊಡುವ ಭರವಸೆಯನ್ನು ನೀಡಲಾಗಿದ್ದು, ಮಕ್ಕಳನ್ನು ಚೆನ್ನಾಗಿ ಓದಿಸಿ ಉನ್ನತ ಅಧಿಕಾರಿಗಳನ್ನಾಗಿ ಮಾಡಬೇಕೆಂದು ಕುಟುಂಬದ ಮುಖ್ಯಸ್ಥರಿಗೆ ಹೇಳಿದರು.

ಕರಡಕಲ್ ಗ್ರಾಮಕ್ಕೆ ಭೇಟಿ: ಹದ್ದಿನಾಳ ಗ್ರಾಮದಿಂದ ದೇವದುರ್ಗ, ಜಾಲಹಳ್ಳಿ ಮಾರ್ಗವಾಗಿ ನೇರವಾಗಿ ಲಿಂಗಸುಗೂರು ತಾಲೂಕಿನ ಕರಡಕಲ್ ಗ್ರಾಮಕ್ಕೆ ಕರ್ನಾಟಕ ಆದಿಜಾಂಬವ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಜಿ.ಎಸ್.ಮಂಜುನಾಥ ಅವರು ಭೇಟಿ ನೀಡಿ, ಮೃತ ರಾಣಿಮ್ಮ ಎಂಬುವವರ ಅಪಹರಣ ಹಾಗೂ ಕೊಲೆ ಹಿನ್ನಲೆಯಲ್ಲಿ ಅವರ ಕುಟುಂಬಕ್ಕೆ ಸಾಂತ್ವನ ಹೇಳಿದರು.

ಇದೇ ಸಂದರ್ಭದಲ್ಲಿ ಕರ್ನಾಟಕ ಆದಿ ಜಾಂಬವ ಅಭಿವೃದ್ಧಿ ನಿಗಮದ ವ್ಯವಸ್ಥಾಪಕ ನಿರ್ದೇಶಕ ಮಂಜುನಾಥ, ಜಿಲ್ಲಾ ವ್ಯವಸ್ಥಾಪಕ ರಾಜೇಂದ್ರ ಜಲ್ದಾರ್ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು, ಕುಟುಂಬದ ಸದಸ್ಯರು ಹಾಗೂ ಸಂಘಟನೆಯ ಮುಖಂಡರು, ಗ್ರಾಮಸ್ಥರು ಉಪಸ್ಥಿತರಿದ್ದರು.


ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿಯವರ ಕಛೇರಿ
ಸಾಮಾಜಿಕ ಅರಣ್ಯ ವಿಭಾಗ, ರಾಯಚೂರು

ಸಂ:ಎ3/ಸಾಅವಿ/ರಾ/ಬಜೆಟ್/ಕಟ್ಟಡ/ಇ.ಟೆಂಡರ್/ಸಿಆರ್–/2026–27 ದಿನಾಂಕ: 09/09/2026.

ಸಂಕ್ಷಿಪ್ತ ಟೆಂಡರ ಪ್ರಕಟಣೆ

2026–27 ನೇ ಸಾಲಿನಲ್ಲಿ ಕಟ್ಟಡ ಯೋಜನೆಯಡಿಯಲ್ಲಿ Eco-Friendly Interpretation Building – Maliyabad Ecotourism Project, Raichur, ಕಾಮಗಾರಿ ಟೆಂಡರ್ ನೋಟೀಫಿಕೇಷನ್ ಷರತ್ತುಗಳಿಗೆ ಒಳಪಟ್ಟು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಯಲ್ಲಿ ಪಾರದರ್ಶಕ (ಕೆ.ಟಿ.ಪಿ.ಪಿ) ಇ–ಪ್ರಕ್ಯೂರ್‌ಮೆಂಟ್ ಟೆಂಡರ್ ಆಹ್ವಾನಿಸಲಾಗಿದ್ದು, ದಿನಾಂಕ:09–09–2026 ರಂದು ಟೆಂಡರ ಪ್ರಕಟಣೆ, ಟೆಂಡರ್ ದಾಖಲೆ ಅರ್ಜಿ ಫಾರ್ಮ ವಿತರಣೆಗೆ ಕೊನೆಯ ದಿನ 19–09–2026, ತಾಂತ್ರಿಕ ಬಿಡ್ ತೆರೆಯುವ ದಿನಾಂಕ:21–09–2026 ರಂದು ಹಾಗೂ ಆರ್ಥಿಕ ಬಿಡ್ ದಿನಾಂಕ:22–09–2026 ರಂದು ನಿಗಧಿಪಡಿಸಲಾಗಿರುತ್ತದೆ. ಹೆಚ್ಚಿನ ವಿವರಗಳಿಗೆ https//kppp.karanataka.gov.in ಹಾಗೂ ಕಛೇರಿಯ ನಾಮಫಲಕಕ್ಕೆ ಲಗತ್ತಿಸಿರುವ ಟೆಂಡರ ಪ್ರಕಟಣೆಯನ್ನು ಕಛೇರಿ ಸಮಯದಲ್ಲಿ ನೋಡಬಹುದು. (ಟೆಂಡರ್ ಮೊತ್ತ ರೂ.38.876 ಲಕ್ಷ)

ಸಹಿ/– ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿಗಳು,
ಸಾಮಾಜಿಕ ಅರಣ್ಯ ವಿಭಾಗ, ರಾಯಚೂರು.

DIP/RCR/265/KSMC&A/2682026-27


# 41ನೇ ರಾಜ್ಯಮಟ್ಟದ ಪತ್ರಕರ್ತರ ಸಮ್ಮೇಳನ: ಸಿದ್ಧತೆಗೆ ಜಿಲ್ಲಾಡಳಿತದ ಸಂಪೂರ್ಣ ಸಹಕಾರ: ಡಿಸಿ ಪೂವಿತಾ ಎಸ್.



ರಾಯಚೂರು: ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ವತಿಯಿಂದ ರಾಯಚೂರಿನಲ್ಲಿ ನಡೆಯಲಿರುವ 41ನೇ ರಾಜ್ಯಮಟ್ಟದ ಪತ್ರಕರ್ತರ ಸಮ್ಮೇಳನದ ಸಿದ್ಧತೆಗಳ ಕುರಿತು ಗುರುವಾರ ಜಿಲ್ಲಾಧಿಕಾರಿ ಪೂವಿತಾ ಎಸ್. ಅವರನ್ನು ಭೇಟಿ ಮಾಡಿ ಚರ್ಚಿಸಲಾಯಿತು. ನಗರದ ನೂತನ ಜಿಲ್ಲಾಡಳಿತ ಭವನದಲ್ಲಿ ಪತ್ರಕರ್ತರೊಂದಿಗೆ ಮಾತುಕತೆ ನಡೆಸಿದ ಜಿಲ್ಲಾಧಿಕಾರಿಗಳು, ಸಮ್ಮೇಳನ ಯಶಸ್ವಿಗೆ ಜಿಲ್ಲಾಡಳಿತದಿಂದ ಅಗತ್ಯ ಸಹಕಾರ ನೀಡಲಾಗುವುದು ಎಂದು ಭರವಸೆ ನೀಡಿದರು.

ಪತ್ರಕರ್ತರ ಸಂಘದ ಜಿಲ್ಲಾಧ್ಯಕ್ಷ ಆರ್. ಗುರುನಾಥ್ ಮಾತನಾಡಿ, ಈ ಬಾರಿ ರಾಜ್ಯಮಟ್ಟದ ಪತ್ರಕರ್ತರ ಸಮ್ಮೇಳನವನ್ನು ರಾಯಚೂರಿನಲ್ಲಿ ಆಯೋಜಿಸಲು ನಿರ್ಧರಿಸಲಾಗಿದ್ದು, ಎರಡು ದಿನಗಳ ಈ ಕಾರ್ಯಕ್ರಮಕ್ಕೆ ರಾಜ್ಯದ ವಿವಿಧ ಭಾಗಗಳಿಂದ 5 ಸಾವಿರಕ್ಕೂ ಹೆಚ್ಚು ಪತ್ರಕರ್ತರು ಆಗಮಿಸುವ ನಿರೀಕ್ಷೆಯಿದೆ ಎಂದರು. ಆಗಮಿಸುವ ಪ್ರತಿನಿಧಿಗಳಿಗೆ ವಸತಿ, ಊಟ, ಸಾರಿಗೆ ಸೇರಿದಂತೆ ಅಗತ್ಯ ಸೌಲಭ್ಯಗಳನ್ನು ಸಮರ್ಪಕವಾಗಿ ಕಲ್ಪಿಸಲು ಜಿಲ್ಲಾಡಳಿತದ ಸಹಕಾರ ಮಹತ್ವದ್ದಾಗಿದೆ ಎಂದು ತಿಳಿಸಿದರು.

ರಾಜ್ಯ ಸಮಿತಿ ಸದಸ್ಯ ಬಸವರಾಜ್ ನಾಗಡದಿನ್ನಿ ಮಾತನಾಡಿ, ಸಮ್ಮೇಳನಕ್ಕೆ ಮುಖ್ಯಮಂತ್ರಿಗಳು ಚಾಲನೆ ನೀಡುವ ನಿರೀಕ್ಷೆಯಿದ್ದು, ಡಿಸೆಂಬರ್ ಕೊನೆಯ ವಾರ ಅಥವಾ ಜನವರಿ ಮೊದಲ ವಾರದಲ್ಲಿ ಕಾರ್ಯಕ್ರಮ ಆಯೋಜಿಸುವ ಸಾಧ್ಯತೆ ಇದೆ ಎಂದು ಹೇಳಿದರು.

ಜಿಲ್ಲಾ ಪ್ರಧಾನ ಕಾರ್ಯದರ್ಶಿ ಸಿದ್ದಯ್ಯ ಸ್ವಾಮಿ ಮಾತನಾಡಿ, ಜಿಲ್ಲಾ ಉಸ್ತುವಾರಿ ಸಚಿವರ ಅಧ್ಯಕ್ಷತೆಯಲ್ಲಿ ಸ್ವಾಗತ ಸಮಿತಿ ರಚಿಸುವ ಉದ್ದೇಶವಿದ್ದು, ಜಿಲ್ಲೆಯ ಜನಪ್ರತಿನಿಧಿಗಳು ಹಾಗೂ ವಿವಿಧ ಕ್ಷೇತ್ರಗಳ ಗಣ್ಯರನ್ನು ಒಳಗೊಂಡಂತೆ ಹಲವು ಉಪಸಮಿತಿಗಳನ್ನು ರಚಿಸಲಾಗುವುದು. ಸಮ್ಮೇಳನದ ಸಿದ್ಧತೆಗಾಗಿ ಜಿಲ್ಲಾಮಟ್ಟದ ಅಧಿಕಾರಿಗಳೊಂದಿಗೆ ಸಭೆ ನಡೆಸಿ ಅಗತ್ಯ ನಿರ್ದೇಶನ ನೀಡಬೇಕು ಎಂದು ಜಿಲ್ಲಾಧಿಕಾರಿಗಳಿಗೆ ಮನವಿ ಮಾಡಿದರು.

ಇದಕ್ಕೆ ಪ್ರತಿಕ್ರಿಯಿಸಿದ ಜಿಲ್ಲಾಧಿಕಾರಿ ಪೂವಿತಾ ಎಸ್., ಸಮ್ಮೇಳನಕ್ಕೆ ಬೇಕಾದ ಸಿದ್ಧತೆಗಳಿಗೆ ಜಿಲ್ಲಾಡಳಿತ ಸಂಪೂರ್ಣ ಸಹಕಾರ ನೀಡಲಿದ್ದು, ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಕ್ತ ಸೂಚನೆ ನೀಡಲಾಗುವುದು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಹಿರಿಯ ಪತ್ರಕರ್ತ ಶಿವಮೂರ್ತಿ ಹಿರೇಮಠ, ಉಪಾಧ್ಯಕ್ಷ ಮಹಾನಂದ ನಾಯಕ್, ಖಜಾಂಚಿ ಮಲ್ಲಿಕಾರ್ಜುನಯ್ಯ, ಜಿಲ್ಲಾ ಕಾರ್ಯಕಾರಿ ಸಮಿತಿ ಸದಸ್ಯರಾದ ಶಿವಪ್ಪ ಮಡಿವಾಳ್ಳ, ಸುರೇಶ ರೆಡ್ಡಿ, ನೀಲಕಂಠ ಸ್ವಾಮಿ, ಲಕ್ಷ್ಮಣ ಕಪಗಲ್, ಪ್ರಸನ್ನಕುಮಾರ್ ಜೈನ್ ಹಾಗೂ ಸಂಘದ ಸದಸ್ಯರಾದ ರಾಚಯ್ಯ ಸ್ವಾಮಿ, ಗುರುರಾಜ ಕೆ., ಪ್ರಭಾಕರ್ ಹುಡೇದ್, ಮುತ್ತಣ್ಣ ಕಬ್ಬಿಣದ್, ಕೃಷ್ಣ ಇನಾಮ್ದಾರ್, ಮಂಜು ಎತ್ತಿನಮಾಳಿಗೆ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಕರ್ನಾಟಕ ಮಾಹಿತಿ ಆಯೋಗದ ಮಹತ್ವತೀರ್ಪು ಸಿಸಿಟಿವಿ ದೃಶವಳಿ ನೀಡಿದ ಪಿ.ಎಸ್. ಐಗಳ ವಿರುದ್ಧ ಕ್ರಮಕ್ಕೆ ಶಿಫಾರಸ್ಸು



ರಾಯಚೂರು ಸೆ. 10 (ಕರ್ನಾಟಕ ವಾರ್ತೆ): ಪೊಲೀಸ್ ಠಾಣೆಗಳಲ್ಲಿ ಸಿಸಿ ಟಿ.ವಿ. ದೃಶ್ಯಾವಳಿ ಸಕಾಲಕ್ಕೆ ನೀಡಲು ನಿರ್ಲಕ್ಷ ವಹಿಸಿದ ಹಾಗೂ ಸುಪ್ರೀಮ್ ಕೋರ್ಟ ತೀರ್ಪಿನಂತೆ ಠಾಣೆಯ ಸಿ.ಸಿ.ಟಿ.ವಿ. ದೃಶ್ಯಾವಳಿ ಸಂಗ್ರಹ ಮಾಡದ ಕಾರಣ ಸಿರಿವಾರ ಪೊಲೀಸ್ ಠಾಣೆಯ ಮೂರು ಪಿ.ಎಸ್.ಐ. ಗಳು ದಂಡ ವಿಧಿಸಿ ಆಯೋಗ ಶಿಸ್ತುಕ್ರಮಕ್ಕೆ ಶಿಫಾರಸ್ಸು ಮಾಡಿದೆ.

ರಾಯಚೂರು ಜಿಲ್ಲೆಯ ಸಿರಿವಾರ ಪೊಲೀಸ್ ಠಾಣೆಗೆ ಪವನಕುಮಾರ ಎನ್ನುವರು ದಿನಾಂಕ: 04-06-2022 ರಂದು ಮಾಹಿತಿ ಹಕ್ಕು ಅಧಿನಿಯಮ 2005ರ 6(1) 7(1) 7(2) ರಡಿ ಅರ್ಜಿ ಸಲ್ಲಿಸಿ ದಿನಾಂಕ: 01-06-2022 ರ ರಾತ್ರಿ 7:45 ರಿಂದ ರಾತ್ರಿ 11:50 ರ ವರೆಗಿನ ಸಿ.ಸಿ. ಟಿ. ವಿ.ದೃಶ್ಯಾವಳಿ ನೀಡುವಂತೆ ಕೋರಿದ್ದರು.

ಮೇಲ್ಮನವಿದಾರರು ಕೋರಿದ ಮಾಹಿತಿ, ಮಾಹಿತಿ ಹಕ್ಕು ಅಧಿನಿಯಮ 2005ರ 6(1) 7(1) 7(2) ರ ಪ್ರಕಾರ ಜೀವ ಮತ್ತು ಸ್ವತಂತ್ರಕ್ಕೆ ಸಂಬಧಿಸಿದ್ದು ಅದನ್ನು 48 ಗಂಟೆಯೊಳಗೆ ಒದಗಿಸಬೇಕಿತ್ತು. ಆದರೆ ಮೇಲ್ಮನವಿದಾರ ಅರ್ಜಿ ಸಲ್ಲಿಸಿದ ಎರಡು ತಿಂಗಳ ಬಳಿಕ ಅಂದರೆ 13-08-2022 ಆಗಿನ ಪಿ.ಎಸ್.ಐ. ಗೀತಾಂಜಲಿ ಸಿಂದೆ. ತಾವು ಕೋರಿದ ಮಾಹಿತಿ ಮಾಹಿತಿ ಹಕ್ಕು ಅಧಿನಿಯಮ 8(1) ಜೆ.ಗೆ ಸಂಬಧಿಸಿದೆ ಎಂದು ಹಿಂಬರಹ ನೀಡಿದ್ದರು.

ತಾವು ಕೋರಿದ ಸಕಾಲಕ್ಕೆ ನೀಡದ ಕಾರಣ ಮೇಲ್ಮನವಿದಾರರು ಕರ್ನಾಟಕ ಮಾಹಿತಿ ಆಯೋಗದ ಕಲಬುರಗಿ ಪೀಠದಲ್ಲಿ ಸಲ್ಲಿಸಿದ ದ್ವಿತೀಯ ಮೇಲ್ಮನವಿಯ ವಿಚಾರಣೆ ನಡೆಸಿ ಮೇಲ್ಮನವಿದಾರರು ಕೋರಿದ ಸಿ.ಸಿ. ಟಿ.ವಿ. ದೃಶ್ಯಾವಳಿ ಒದಗಿಸುವಂತೆ ಆದೇಶ ನೀಡಿತ್ತು. ಆದರೆ ಆಯೋಗದ ಆದೇಶ ಪಾಲಿಸದ ಕಾರಣ ಆ ಅವಧಿಯಲ್ಲಿ ಪಿ.ಎಸ್.ಐ.ಗಳಾಗಿ ಕಾರ್ಯನಿರ್ವಹಿಸಿದ ಗೀತಾಂಜಲಿ ಸಿಂದೆ, ಅವಿನಾಶ ಕಾಂಬಳೆ, ಹಾಗೂ ಗುರುಚಂದ್ರ ಯಾದವ ಅವರಿಗೆ ಅನುಕ್ರಮವಾಗಿ 25 ಸಾವಿರ, 15 ಸಾವಿರ ಹಾಗೂ 25 ಸಾವಿರ ದಂಡ ವಿಧಿಸಿತ್ತು. ಆದರೆ ಪ್ರತಿವಾದಿ ಪಿ.ಎಸ್.ಐ.ಗಳು ದಂಡ ಪಾವತಿ ಮಾಡಿದರೂ ಸಿ.ಸಿ. ಟಿ.ವಿ. ದೃಶ್ಯಾವಳಿ ನೀಡಿರಲಿಲ್ಲವಾದ್ದರಿಂದ ಮೂರು ಜನ ಪಿ.ಎಸ್.ಐ.ಗಳ ವಿರುದ್ಧ ಸೂಕ್ತ ಕ್ರಮಕ್ಕೆ ಕರ್ನಾಟಕ ಮಾಹಿತಿ ಆಯೋಗ ಕಲಬುರಗಿ ಪೀಠದ ಆಯುಕ್ತರಾದ ಶ್ರೀ ಬಿ.ವೆಂಕಟ ಸಿಂಗ್ ಶಿಫಾರಸ್ಸು ಮಾಡಿ ಆದೇಶ ಮಾಡಿರುತ್ತಾರೆ.

ಬಳಿಕ ಸಿರಿವಾರ ಪೊಲೀಸ್ ಠಾಣೆಗೆ ಪಿ.ಎಸ್.ಐ.ಆಗಿ ಸೇವೆಗೆ ಬಂದ ಪಿ.ಎಸ್.ಐ.ಬಸನಗೌಡ ಮೇಲ್ಮನವಿದಾರರು ಕೋರಿದ ಸಿ.ಸಿ.ಟಿ.ವಿ. ದೃಶ್ಯಾವಳಿ ನೀಡಲು ಅನುಕೂಲವಾಗುವಂತೆ ರೀಟ್ರಿವ್ ಮಾಡಲು ಕೋರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಿಗೆ ಪತ್ರ ಬರೆದು ಕೋರಿದ ಹಿನ್ನಲೆಯಲ್ಲಿ ದಿನಾಂಕ:02-01-2025 ರಂದು ಸಿರವಾರ ಠಾಣೆಗೆ ಆಗಮಿಸಿದ ತಾಂತ್ರಿಕ ತಂಡ ಸಿ.ಸಿ. ಟಿ.ವಿ. ದೃಶ್ಯಾವಳಿ ಸಂಗ್ರಹ ಇರುವ ಹಾರ್ಡ ಡಿಸ್ಕ್ ಪರಿಶೀಲನೆ ಮಾಡಲಾಗಿ, ಸದರಿ ಹಾರ್ಡ ಡಿಸ್ಕ್ನಲ್ಲಿ ಕೇವಲ 15 ತಿಂಗಳ ಸಿಸಿ ಟಿ.ವಿ. ದೃಶ್ಯಾವಳಿ ಮಾತ್ರ ಸಂಗ್ರಹವಿದ್ದು, ಅದಕ್ಕಿಂತ ಮುಂಚಿನ ದೃಶ್ಯಾವಳಿ ಸಂಗ್ರಹ ವಿಲ್ಲವೆಂದು ನೀಡಿದ ವರದಿಯನ್ನ ಮೇಲ್ಮನವಿದಾರರಿಗೆ ದಿನಾಂಕ: 02-01-2025 ರಂದು ಹಿಂಬರಹ ನೀಡಿದ್ದರು. ಹೀಗಾಗಿ ಮೇಲ್ಮನವಿದಾರ ಕೋರಿದ ಮಾಹಿತಿ ಸಕಾಲಕ್ಕೆ ನೀಡದ ನಿರ್ಲಕ್ಷ ವಹಿಸಿದ ಕಾರಣ ಆಯುಕ್ತರು ಮೇಲಿನಂತೆ ಶಿಫಾಸ್ಸು ಮಾಡಿ ಆದೇಶ ಮಾಡಿದ್ದಾರೆ.

ಮೇಲ್ಮನವಿದಾರರು ಕೋರಿದ ಮಾಹಿತಿ ಸಕಾಲಕ್ಕೆ ನೀಡದೆ ಇರುವುದು ಸೇರಿದಂತೆ ಸುಪ್ರೀಂ ಕೋರ್ಟ ಎಸ್.ಎಲ್.ಪಿ. (ಕ್ರಿಮಿನಲ್ )ನಂ. 3543/2020ರ ಆದೇಶ ಉಲ್ಲಂಘನೆ ಮಾಡಿರುವುದು ಸಾಬಿತಾಗಿರುವುದರಿಂದ ಪ್ರತಿವಾದಿ ಪಿ.ಎಸ್.ಐ.ಗಳಾಗಿದ್ದ ಗೀತಾಂಜಲಿ ಸಿಂದೆ, ಅವಿನಾಶ ಕಾಂಬಳೆ, ಹಾಗೂ ಗುರುಚಂದ್ರ ಯಾದವ ಅವರ ವಿರುದ್ಧ ಕೆ.ಸಿ.ಎಸ್.ಆರ್. ನಿಯಮದಂತೆ ಅನ್ವಯವಾಗುವ ಶಿಸ್ತುಕ್ರಮ ಕೈಗೊಳ್ಳುವಂತೆ ಆಯೋಗ ಮಾಡಿದ ಆದೇಶದಂತೆ ಪೊಲೀಸ್ ಕಾಯ್ದೆ ನಿಯಮ 7 (ರೂಲ್-7) ರ ಪ್ರಕಾರ ನೋಟಿಸ್ ಜಾರಿ ಮಾಡಿದ ರಾಯಚೂರು, ಬಳ್ಳಾರಿ ಮತ್ತು ವಿಜಯನಗರ ಬಗ್ಗೆ ಜಿಲ್ಲಾ ವರಿಷ್ಠಾಧಿಕಾರಿಗಳು ಶಿಸ್ತು ಕ್ರಮಕ್ಕೆ ಮುಂದಾಗಿದ್ದು, ಈ ಕೈಗೊಂಡ ಕ್ರಮ ಪಾಲನಾ ವರದಿ ನೀಡುವಂತೆ ಮೂರು ಜಿಲ್ಲೆಯ ವರಿಷ್ಠಾಧಿಕಾರಿಗಳಿಗೆ ಆಯೋಗ ಆದೇಶ ನೀಡಿದೆ.

ಮುಂದುವರಿದ ಸುಪ್ರೀಂಕೋರ್ಟ ತೀರ್ಪಿನಂತೆ ರಾಜ್ಯದ ಎಲ್ಲಾ ಪೊಲೀಸ್ ಠಾಣೆಗಳಲ್ಲಿ ಇರುವ ಸಿಸಿ ಟಿ.ವಿ. ದೃಶ್ಯಾವಳಿ ಸಂಗ್ರಹಿಸಲು ಅಗತ್ಯವಾದ ಸಂಗ್ರಹ ಸಾಮರ್ಥ್ಯದ ಹಾರ್ಡ ಡಿಸ್ಕ್ ಹಾಗೂ ಸಿಸಿ ಟಿ.ವಿ.ಗಳು ಕಾರ್ಯನಿರ್ವಹಿಸುವಂತೆ ಸುಸ್ಥಿತಿಯಲ್ಲಿ ಇಟ್ಟು 18 ತಿಂಗಳ ಕಾಯ್ದಿರಿಸುವಂತೆ ಕ್ರಮ ಕೈಗೊಳ್ಳಲು ರಾಜ್ಯ ಪೊಲೀಸ್ ಮಹಾ ನಿರ್ದೇಶಕರು ಮತ್ತು ಆರಕ್ಷಕ ಮಹಾ ನಿರೀಕ್ಷಕರಾದ ಡಾ.ಎಂ. ಎಸ್. ಸಲೀಂ ಅವರಿಗೆ ಆಯೋಗ ಸೂಚಿಸಿದೆ.

# ಸಮಾಜ ನಿರ್ಮಾಣದಲ್ಲಿ ಶಿಕ್ಷಕರ ಪಾತ್ರ ಮಹತ್ವದ್ದು: ಗೌರಮ್ಮ ಕೂಡತಿನಿ



ಕುಷ್ಟಗಿ: ವಿದ್ಯಾರ್ಥಿಗಳಲ್ಲಿರುವ ಅಂಕುಡೊಂಕುಗಳನ್ನು ತಿದ್ದಿ, ಅವರ ಬದುಕಿಗೆ ಸರಿಯಾದ ದಿಕ್ಕು ತೋರಿಸುವಲ್ಲಿ ಶಿಕ್ಷಕರ ಪಾತ್ರ ಅತ್ಯಂತ ಮಹತ್ವದ್ದಾಗಿದೆ ಎಂದು ಕುಷ್ಟಗಿ ಇನ್ನರ್ ವ್ಹೀಲ್ ಕ್ಲಬ್ ಅಧ್ಯಕ್ಷೆ ಗೌರಮ್ಮ ಕೂಡತಿನಿ ಹೇಳಿದರು.

ತಾಲೂಕಿನ ಕಂದಕೂರ ಗ್ರಾಮದ ಸರ್ಕಾರಿ ಪ್ರೌಢಶಾಲೆಯಲ್ಲಿ ಕುಷ್ಟಗಿ ಇನ್ನರ್ ವ್ಹೀಲ್ ಕ್ಲಬ್ ವತಿಯಿಂದ ಆಯೋಜಿಸಿದ್ದ ಶಿಕ್ಷಕರ ದಿನಾಚರಣೆ ಕಾರ್ಯಕ್ರಮದಲ್ಲಿ ಶಿಕ್ಷಕರನ್ನು ಸನ್ಮಾನಿಸಿ ಮಾತನಾಡಿದ ಅವರು, ಶಿಕ್ಷಕರ ನಿರಂತರ ಕಾಳಜಿ, ಮಾರ್ಗದರ್ಶನ ಹಾಗೂ ಪರಿಶ್ರಮದಿಂದ ವಿದ್ಯಾರ್ಥಿಗಳ ಭವಿಷ್ಯ ರೂಪುಗೊಳ್ಳುತ್ತದೆ. ಇದರಿಂದ ಸಮಾಜದಲ್ಲಿ ಗುರುವಿನ ಸ್ಥಾನ ಮತ್ತಷ್ಟು ಗೌರವಪೂರ್ಣವಾಗಿದೆ ಎಂದರು.

ಕ್ಲಬ್ ಕಾರ್ಯದರ್ಶಿ ಶ್ರೀದೇವಿ ಮಸ್ಕಿಮಠ ಮಾತನಾಡಿ, ಶಿಕ್ಷಕರು ಸಮಾಜದ ನಿರ್ಮಾತೃಗಳಾಗಿದ್ದು, ವಿದ್ಯಾರ್ಥಿಗಳಲ್ಲಿ ಜ್ಞಾನ, ಶಿಸ್ತು ಹಾಗೂ ಮಾನವೀಯ ಮೌಲ್ಯಗಳನ್ನು ಬೆಳೆಸುವಲ್ಲಿ ಪ್ರಮುಖ ಪಾತ್ರ ವಹಿಸುತ್ತಾರೆ ಎಂದು ಹೇಳಿದರು.

ಇನ್ನರ್ ವ್ಹೀಲ್ ಕ್ಲಬ್ ಜಿಲ್ಲಾ ಕಾರ್ಯದರ್ಶಿ ಡಾ. ಪಾರ್ವತಿ ಎಂ. ಪಲೂಟಿ ವಿದ್ಯಾರ್ಥಿನಿಯರಿಗೆ ಆರೋಗ್ಯದ ಕುರಿತು ಮಾರ್ಗದರ್ಶನ ನೀಡಿದರು. ಕ್ಲಬ್ ಸಂಪಾದಕಿ ಶಾರದಾ ಶೆಟ್ಟರ್ ಮಾತನಾಡಿ, ಶಿಕ್ಷಕರ ಸೇವೆಯನ್ನು ಗೌರವಿಸುವುದು ಸಮಾಜದ ಕರ್ತವ್ಯವಾಗಿದ್ದು, ಅವರಿಗೆ ಕೃತಜ್ಞತೆ ಸಲ್ಲಿಸುವ ಉದ್ದೇಶದಿಂದ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದರು.

ಈ ಸಂದರ್ಭದಲ್ಲಿ ಶಾಲೆಯ ಶಿಕ್ಷಕರಿಗೆ ನೆನಪಿನ ಕಾಣಿಕೆ ನೀಡಿ ಸನ್ಮಾನಿಸಲಾಯಿತು. ಅಡುಗೆ ಸಿಬ್ಬಂದಿಗೆ ಸೀರೆ ಹಾಗೂ ವಿದ್ಯಾರ್ಥಿಗಳಿಗೆ ಕ್ರೀಡಾ ಸಮವಸ್ತ್ರಗಳನ್ನು ವಿತರಿಸಲಾಯಿತು.

ಮುಖ್ಯಶಿಕ್ಷಕ ಬಸವರಾಜ ಗುರಿಕಾರ ಅಧ್ಯಕ್ಷತೆ ವಹಿಸಿದ್ದರು. ತಬಸು ಮದಲಗಟ್ಟಿ, ಶಿಕ್ಷಕರಾದ ಕಿಶನರಾವ್ ಕುಲಕರ್ಣಿ, ಮಹಾಂತೇಶ ಉಳ್ಳಾಗಡ್ಡಿ, ಶಿಲ್ಪಾ ಅಂಗಡಿ, ಶ್ರೀದೇವಿ ಕಟ್ಟಿಮನಿ, ಶಿವಲೀಲಾ ಮೇದಿನಾಪುರ, ಮಂಜುಳಾ, ಚನ್ನಮ್ಮ, ಕವಿತಾ, ಅಕ್ಷತಾ ಕಿರಣ, ವಿಜಯಲಕ್ಷ್ಮಿ, ಮುತ್ತಣ್ಣ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಸರ್ವಿಸ್ ರಸ್ತೆಗೆ ಅಡ್ಡಿಯಾಗಿರುವ ಕಟ್ಟಡ ತೆರವಿಗೆ ಒತ್ತಾಯ



ಲಿಂಗಸುಗೂರು: ಪಟ್ಟಣದಲ್ಲಿ ದಿನದಿಂದ ದಿನಕ್ಕೆ ವಾಹನ ಸಂಚಾರ ದಟ್ಟಣೆ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ, ಬೆಂಗಳೂರು ಬೈಪಾಸ್ ರಸ್ತೆಯ ಸರ್ವಿಸ್ ರಸ್ತೆಗೆ ಅಡ್ಡಿಯಾಗಿರುವ ಕಟ್ಟಡವನ್ನು ತೆರವುಗೊಳಿಸಿ ಅರ್ಧಕ್ಕೆ ನಿಂತಿರುವ ರಸ್ತೆ ಕಾಮಗಾರಿಯನ್ನು ಪೂರ್ಣಗೊಳಿಸಬೇಕು ಎಂದು ನಮ್ಮ ಕರ್ನಾಟಕ ರಕ್ಷಣಾ ವೇದಿಕೆ ತಾಲೂಕು ಘಟಕ ಆಗ್ರಹಿಸಿದೆ.

ವೇದಿಕೆಯ ತಾಲೂಕು ಅಧ್ಯಕ್ಷ ತಿಮ್ಮಾರೆಡ್ಡಿ ಮುನ್ನೂರು ನೇತೃತ್ವದಲ್ಲಿ ಸಹಾಯಕ ಆಯುಕ್ತರಿಗೆ ಮನವಿ ಸಲ್ಲಿಸಲಾಯಿತು. ಹೆದ್ದಾರಿ ಕಾಮಗಾರಿ ಸಂದರ್ಭದಲ್ಲಿ ಬೈಪಾಸ್ ರಸ್ತೆ ಬದಿಯಲ್ಲಿದ್ದ ಹಲವು ಕಟ್ಟಡಗಳನ್ನು ತೆರವುಗೊಳಿಸಲಾಗಿದ್ದರೂ ಒಂದು ಕಟ್ಟಡ ಮಾತ್ರ ಉಳಿದಿದ್ದು, ಇದರಿಂದ ಸರ್ವಿಸ್ ರಸ್ತೆ ಕಾಮಗಾರಿ ಪೂರ್ಣಗೊಳ್ಳದೆ ಸಾರ್ವಜನಿಕರಿಗೆ ತೊಂದರೆಯಾಗುತ್ತಿದೆ. ತಾಲೂಕು ಆಡಳಿತ ಕೂಡಲೇ ಕ್ರಮ ಕೈಗೊಳ್ಳಬೇಕು ಎಂದು ಮನವಿಯಲ್ಲಿ ಒತ್ತಾಯಿಸಲಾಗಿದೆ.

ಪುರಸಭೆ ವ್ಯಾಪ್ತಿಯ ಹಲವು ವಾರ್ಡ್‌ಗಳಲ್ಲಿ ರಸ್ತೆ, ಚರಂಡಿ ಮತ್ತು ಬೀದಿ ದೀಪಗಳ ಸಮಸ್ಯೆ ಇದೆ. ವಾರ್ಡ್ ನಂ.17ರಲ್ಲಿ ಬೀದಿ ದೀಪಗಳ ಸಮಸ್ಯೆ ಹಾಗೂ ಬಲಭೀಮ ಹೋಟೆಲ್ ಮುಂಭಾಗದಿಂದ ಪದ್ಮಾವತಿ ನಗರದವರೆಗೆ ಜಂಗಲ್ ಕಟಿಂಗ್ ಮಾಡಬೇಕಾಗಿದೆ. ಹಲವೆಡೆ ಬೀದಿ ದೀಪಗಳು ಉರಿಯದ ಕಾರಣ ಸಾರ್ವಜನಿಕರಲ್ಲಿ ಆತಂಕ ಉಂಟಾಗಿದ್ದು, ಅವುಗಳನ್ನು ತಕ್ಷಣ ಸರಿಪಡಿಸಬೇಕು ಎಂದು ಆಗ್ರಹಿಸಿದರು.

ಹಲವು ವಾರ್ಡ್‌ಗಳಲ್ಲಿ ಕುಡಿಯುವ ನೀರು ಸಮರ್ಪಕವಾಗಿ ಸರಬರಾಜಾಗುತ್ತಿಲ್ಲ. ಸಮಸ್ಯೆ ಕುರಿತು ವಿಚಾರಿಸಿದಾಗ ಪುರಸಭೆ ಸಿಬ್ಬಂದಿ ನಿರ್ಲಕ್ಷ್ಯದಿಂದ ವರ್ತಿಸುತ್ತಿದ್ದಾರೆ ಎಂದು ಆರೋಪಿಸಿ, ಮಳೆಗಾಲದಲ್ಲಿಯೂ ಕುಡಿಯುವ ನೀರಿಗಾಗಿ ಜನರು ಪರದಾಡುವಂತಾಗಿದೆ. ಈ ಸಮಸ್ಯೆಗೆ ಕೂಡಲೇ ಪರಿಹಾರ ಕಲ್ಪಿಸಬೇಕು ಎಂದು ಮನವಿ ಮಾಡಿದರು.

ವಾರ್ಡ್ ನಂ.7ರ ಶಾಸಕರ ಕಚೇರಿ ಮುಂಭಾಗದಲ್ಲಿರುವ ರಾಜಕಾಲುವೆಯ ಗೋಡೆ ಬಿರುಕು ಬಿಟ್ಟಿದ್ದು ಕುಸಿಯುವ ಹಂತದಲ್ಲಿದೆ. ಈ ಕುರಿತು ಗಮನಕ್ಕೆ ತಂದಿದ್ದರೂ ಕ್ರಮವಾಗಿಲ್ಲ. ಕೂಡಲೇ ಕಾಲುವೆ ಗೋಡೆ ದುರಸ್ತಿ ಮಾಡಬೇಕು. ಶಾಸಕರ ಕಚೇರಿ ಎದುರಿನ ಸಿಸಿ ರಸ್ತೆಯಿಂದ ಗಡಿಯಾರ ಚೌಕ್‌ವರೆಗೆ ಸಿಸಿ ರಸ್ತೆ ನಿರ್ಮಿಸಿ ವಾಹನ ಸಂಚಾರಕ್ಕೆ ಅನುಕೂಲ ಕಲ್ಪಿಸಬೇಕು ಎಂದು ಒತ್ತಾಯಿಸಿದರು.

ಪಿಂಚಣಿಪುರ ಪ್ರದೇಶದಲ್ಲಿ ಸಿಸಿ ರಸ್ತೆ ನಿರ್ಮಾಣಕ್ಕಾಗಿ ಕಂಕರ್ ಹಾಕಿ ಕಾಮಗಾರಿಯನ್ನು ಸ್ಥಗಿತಗೊಳಿಸಲಾಗಿದ್ದು, ಇದರಿಂದ ವಾಹನ ಸವಾರರು ಹಾಗೂ ಪಾದಚಾರಿಗಳು ತೊಂದರೆ ಅನುಭವಿಸುತ್ತಿದ್ದಾರೆ. ಗುತ್ತಿಗೆದಾರರಿಗೆ ಸೂಚನೆ ನೀಡಿ ಶೀಘ್ರ ಕಾಮಗಾರಿ ಆರಂಭಿಸಬೇಕು. ಜೊತೆಗೆ ಗ್ರಾಮೀಣ ಭಾಗದಿಂದ ಪಟ್ಟಣಕ್ಕೆ ಬರುವ ಜನರು ಹಾಗೂ ಪಟ್ಟಣದ ಸಾರ್ವಜನಿಕರ ಅನುಕೂಲಕ್ಕಾಗಿ ಪುರುಷ ಮತ್ತು ಮಹಿಳೆಯರ ಪ್ರತ್ಯೇಕ ಸಾರ್ವಜನಿಕ ಶೌಚಾಲಯಗಳನ್ನು ನಿರ್ಮಿಸಬೇಕು ಎಂದು ಬೇಡಿಕೆ ಸಲ್ಲಿಸಿದರು.

ತಮ್ಮ ಬೇಡಿಕೆಗಳ ಕುರಿತು ವಾರದೊಳಗೆ ಕ್ರಮ ಕೈಗೊಳ್ಳಬೇಕು ಎಂದು ವೇದಿಕೆ ಪದಾಧಿಕಾರಿಗಳು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ತಾಲೂಕು ಪ್ರಧಾನ ಕಾರ್ಯದರ್ಶಿ ರಮೇಶ ಗುತ್ತೇದಾರ ಹೊನ್ನಳ್ಳಿ, ಮೌನೇಶ ರೆಡ್ಡಿ ಮುನ್ನೂರು, ಯಲ್ಲಪ್ಪ ಬಂಡಿ, ಶ್ರೀಕಾಂತ ರೆಡ್ಡಿ ಮುನ್ನೂರು, ಅಮ್ರ್ ಈರಣ್ಣ ರೆಡ್ಡಿ, ಅಶೋಕ ಗಸ್ತಿ, ಸಚಿನ್ ರಾಠೋಡ, ಸೋಮನಾಥ ಗೊರೆಬಾಳ, ಸುರೇಶ ಕುಪ್ಪಿಗುಡ್ಡ, ಭೀಮೇಶ ಆರ್. ನಾಯಕ, ಸಚಿನ್ ಗುತ್ತೇದಾರ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಸಿ ಪಿ ಐ ಮಾರ್ಗದರ್ಶನದಲ್ಲಿ ಅಸ್ಪೃಶ್ಯತೆಗೆ ಅಂತ್ಯ ಹಾಡಿದ ಪಿ ಎಸ್ ಐ ಚಂದ್ರಶೇಖರ್ ಹಿರೇಮಠ



ಸಿರವಾರ : ನಮ್ಮ ದೇಶಕ್ಕೆ ಸ್ವಾತಂತ್ರ್ಯ ಸಿಕ್ಕು ಏಳು ದಶಕ ಕಳೆದರೂ ದೇಶದಲ್ಲಿ ಅಸ್ಪೃಶ್ಯತೆ ಎಂಬ ಅನಿಷ್ಟ ಪದ್ಧತಿ ಇನ್ನೂ ಜೀವಂತವಾಗಿದೆ ಎನ್ನುವುದು ದೇಶಕ್ಕೆ ಮಾರಕ.

ಇಂತಹ ಘಟನೆ ಸಿರವಾರ ತಾಲೂಕಿನ ಕುಗಳತೆ ದೂರದಲ್ಲಿರುವ ಕಡದಿನ್ನಿ ಗ್ರಾಮದಲ್ಲಿ ಸಹ ಅಸ್ಪೃಶ್ಯತೆ ಎಂಬ ಹಂಟು ರೋಗದಿಂದ ದೂರವೇನಿಲ್ಲ ಈ ಗ್ರಾಮದಲ್ಲಿ ಅಸ್ಪೃಶ್ಯರಿಗೆ ಯಾವುದೇ ದೇವಸ್ಥಾನದ ಒಳಗಡೆ ಪ್ರವೇಶವಿಲ್ಲ ಇಂಥ ಆಚರಣೆಗಳಿಂದ ಆ ಗ್ರಾಮದ ದಲಿತರು ಬೆಸತ್ತು ಹೋಗಿದ್ದಾರೆ ಕೆಲ ದಿನಗಳ ಹಿಂದೆ ಗ್ರಾಮದ ದಲಿತ ಯುವಕರ ಮೇಲೆ ಅದೇ ಗ್ರಾಮದ ಮೇಲ್ವರ್ಗದ ಯುವಕರು ಹಲ್ಲೆ ಮಾಡಿದ ಘಟನೆ ನಡೆಯಿತು ಈ ವಿಚಾರವಾಗಿ ಸಿರವಾರ ಪೊಲೀಸ್ ಠಾಣೆಯಲ್ಲಿ ಎಸ್ ಸಿ ಎಸ್ ಟಿ ದೌರ್ಜನ್ಯ ಕಾಯ್ದೆ ಅಡಿ ಪ್ರಕರಣ ದಾಖಲಾಗಿದೆ ದೌರ್ಜನಕ್ಕೆ ಒಳಗಾದ ದಲಿತರು ಠಾಣೆಯ ಪಿ ಎಸ್ ಐ ಆದ ಚಂದ್ರಶೇಖರ ಹಿರೇಮಠ್ ಹತ್ರ ತಮ್ಮ ನೋವುಗಳನ್ನು ತೋಡಿಕೊಂಡಿದ್ದರು.

ತಕ್ಷಣ ಎಚ್ಚೆತ್ತುಕೊಂಡ ಅವರು ತಮ್ಮ ಮೇಲಾಧಿಕಾರಿಗಳಾದ ಸಿಪಿಐ ಶಶಿಕಾಂತ್ ಎಂ ಜೊತೆ ಚರ್ಚಿಸಿ ಅವರ ಸಲಹೆ ಮೇರೆಗೆ

ಕಡದಿನ್ನಿ ಗ್ರಾಮಕ್ಕೆ ತೆರಳಿ ದಲಿತರು ಮತ್ತು ದಲಿತ ಮಹಿಳೆಯರನ್ನು ಕರೆದುಕೊಂಡು ಆ ಗ್ರಾಮದಲ್ಲಿ ದಲಿತರಿಗೆ ಯಾವ ದೇವಸ್ಥಾನದಲ್ಲಿ ಪ್ರವೇಶವಿಲ್ಲವೂ ಆ ದೇವಸ್ಥಾನದ ಗರ್ಭಗುಡಿಯ ಒಳಗಡೆ ಕರೆದುಕೊಂಡು ಹೋಗಿ ಪೂಜೆ ಸಲ್ಲಿಸಿ ನಂತರ ನೊಂದಂತ ದಲಿತ ಕುಟುಂಬಗಳಿಗೆ ಧೈರ್ಯ ತುಂಬಿ ನಿಮ್ಮ ಸಹಾಯಕ್ಕೆ ಯಾವಾಗ ನಮ್ಮ ಪೊಲೀಸ್ ಇಲಾಖೆ ಜೊತೆಗೆ ಇರುತ್ತೆ ಎಂದು ಭರವಸೆ ನೀಡಿದರು.

ನಂತರ ಆ ಗ್ರಾಮದ ಮೇಲ್ವರ್ಗದ ಜನಗಳ ಜೊತೆ ಚರ್ಚಿಸಿ ಸಮಾನವಾಗಿ ಮತ್ತು ಸಹಬಾಳ್ವೆಯಿಂದ ಬಾಳಿ ಈ ಗ್ರಾಮದಲ್ಲಿ ಇನ್ಮೇಲೆ ಯಾವುದೇ ರೀತಿಯ ಅಸ್ಪೃಶ್ಯತೆ ಆಚರಣೆ ಆಗದಂತೆ ನೋಡಿಕೊಳ್ಳಿ ಅಂದು ಜನರಿಗೆ ಕಾನೂನು ಅರಿವು ಮೂಡಿಸಿದರು.

ಈ ಘಟನೆಯಿಂದ ಪಿ ಎಸ್ ಐ ಚಂದ್ರಶೇಖರ ಹಿರೇಮಠ ಮತ್ತು ಸಿಪಿಐ ಶಶಿಕಾಂತ್ ಅವರ ಈ ಕಾರ್ಯಕ್ಕೆ ಎಲ್ಲರೂ ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

# ಸಿರವಾರದಲ್ಲಿ ತಾಲೂಕು ಮಟ್ಟದ ಮಹಿಳಾ ವಿಚಾರಗೋಷ್ಠಿ



ಸಿರವಾರ, ಸೆ.10: ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಬಿ.ಸಿ. ಟ್ರಸ್ಟ್ (ರಿ) ಸಿರವಾರ ತಾಲೂಕು ಘಟಕದ ವತಿಯಿಂದ ಮಹಿಳಾ ಜ್ಞಾನ ವಿಕಾಸ ಯೋಜನೆಯಡಿ ತಾಲೂಕು ಮಟ್ಟದ ಮಹಿಳಾ ವಿಚಾರಗೋಷ್ಠಿ ಗುರುವಾರ ಸ್ಥಳೀಯ ಶ್ರೀ ಈಶ್ವರ ದೇವಸ್ಥಾನದ ಆವರಣದಲ್ಲಿ ಜರುಗಿತು.

ಪದ್ಮವಿಭೂಷಣ ಡಾ. ಡಿ. ವೀರೇಂದ್ರ ಹೆಗ್ಗಡೆ ಹಾಗೂ ಮಾತೃಶ್ರೀ ಡಾ. ಹೇಮಾವತಿ ವಿ. ಹೆಗ್ಗಡೆಯವರ ಮಾರ್ಗದರ್ಶನದಲ್ಲಿ ಆಯೋಜಿಸಿದ್ದ ಕಾರ್ಯಕ್ರಮಕ್ಕೆ ಗಣ್ಯರು ಜ್ಯೋತಿ ಬೆಳಗಿಸುವ ಮೂಲಕ ಚಾಲನೆ ನೀಡಿದರು.

ಕಲ್ಯಾಣ ಕರ್ನಾಟಕ ಪ್ರಾದೇಶಿಕ ವಿಭಾಗ ಕೊಪ್ಪಳದ ಪ್ರಾಂತೀಯ ನಿರ್ದೇಶಕ ಜಿ. ಚಂದ್ರಶೇಖರ್, ರಾಯಚೂರು ಜಿಲ್ಲಾ ನಿರ್ದೇಶಕ ರಾಘವೇಂದ್ರ ಪಟಗಾರ್, ಜಿಲ್ಲಾ ಜನಜಾಗೃತಿ ವೇದಿಕೆ ಸದಸ್ಯರಾದ ಅರಿಕೇರಿ ಬಸವಲಿಂಗಪ್ಪ ಸಾಹುಕಾರ ಮತ್ತು ಅಯ್ಯನಗೌಡ ಏರಡ್ಡಿ ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದರು.

ಮನೆ ನಿರ್ಧಾರಗಳಲ್ಲಿ ಮಹಿಳೆಯರ ಪಾತ್ರ ವಿಷಯ ಕುರಿತು ಸಿರವಾರದ ಶಾಂತಿನಿಕೇತನ ಪ್ರೌಢಶಾಲೆಯ ಶಿಕ್ಷಕಿ ನೇತ್ರಾವತಿ ವಿಶೇಷ ಉಪನ್ಯಾಸ ನೀಡಿ, ಕುಟುಂಬ ಮತ್ತು ಸಾಮಾಜಿಕ ಜೀವನದಲ್ಲಿ ಮಹಿಳೆಯರ ನಿರ್ಧಾರಾತ್ಮಕ ಪಾತ್ರದ ಕುರಿತು ಮಾಹಿತಿ ನೀಡಿದರು.

ಕಾರ್ಯಕ್ರಮದ ಅಂಗವಾಗಿ ತಾಲೂಕಿನ ಆಯ್ದ ಅಸಹಾಯಕ ವಿಕಲಚೇತನ ಫಲಾನುಭವಿಗಳಿಗೆ ವೀಲ್ ಚೇರ್‌ಗಳನ್ನು ವಿತರಿಸಲಾಯಿತು.

ಈ ಸಂದರ್ಭದಲ್ಲಿ ಯೋಜನಾಧಿಕಾರಿ ಸಂದೀಪ್ ನಾಯ್ಕ್, ಜ್ಞಾನ ವಿಕಾಸ ಸಮನ್ವಯಾಧಿಕಾರಿ ಯಶೋಧಾ, ವಲಯ ಜ್ಞಾನ ವಿಕಾಸ ಸಂಘದ ಅಂಬಿಕಾ, ಮೇಲ್ವಿಚಾರಕರಾದ ವನಿತಾ ಮತ್ತು ಪ್ರಕಾಶ್, ಒಕ್ಕೂಟದ ಸಿಬ್ಬಂದಿ, ಸೇವಾಪ್ರತಿನಿಧಿಗಳು ಹಾಗೂ ತಾಲೂಕಿನ ನೂರಾರು ಮಹಿಳೆಯರು ಉಪಸ್ಥಿತರಿದ್ದರು.

# ಚುನಾವಣೆಯಲ್ಲಿ ಬಿಜೆಪಿಗೆ ಜನಾಶೀರ್ವಾದ ಸಿಗಲಿದೆ: ವಿಜಯೇಂದ್ರ

ಬಳ್ಳಾರಿ: ರಾಜ್ಯ ಸರ್ಕಾರದ ವಿರುದ್ಧ ಬಿಜೆಪಿ ಹೋರಾಟ ಆರಂಭಿಸಿದ್ದು, ಮುಂಬರುವ ಚುನಾವಣಾ ರಣರಂಗದಲ್ಲಿ ಪಕ್ಷ ಅಭೂತಪೂರ್ವ ಗೆಲುವು ಸಾಧಿಸಲಿದೆ ಎಂದು ವಿಜಯೇಂದ್ರ ವಿಶ್ವಾಸ ವ್ಯಕ್ತಪಡಿಸಿದರು.

"ಈ ಭ್ರಷ್ಟ ಮತ್ತು ಜನವಿರೋಧಿ ಸರ್ಕಾರದ ವಿರುದ್ಧ ನಮ್ಮ ಹೋರಾಟ ಆರಂಭವಾಗಿದೆ. ಡಿ.ಕೆ. ಶಿವಕುಮಾರ್ ಆಗಲಿ ಅಥವಾ ರಾಜ್ಯ ಕಾಂಗ್ರೆಸ್ ಮುಖ್ಯಸ್ಥ ಬಿ.ಕೆ. ಹರಿಪ್ರಸಾದ್ ಆಗಲಿ ಬಿಜೆಪಿಯ ಗೆಲುವನ್ನು ತಡೆಯಲು ಸಾಧ್ಯವಿಲ್ಲ. ರಾಜ್ಯದ ಜನತೆ ಬಿಜೆಪಿಗೆ ಆಶೀರ್ವಾದ ಮಾಡಲಿದ್ದಾರೆ" ಎಂದು ಅವರು ಹೇಳಿದರು.

ರಾಜ್ಯ ಸರ್ಕಾರ ಜನಸ್ನೇಹಿ ಕಾರ್ಯಕ್ರಮಗಳನ್ನು ರೂಪಿಸುವಲ್ಲಿ ಹಾಗೂ ನಿರುದ್ಯೋಗ ಸಮಸ್ಯೆಗೆ ಪರಿಣಾಮಕಾರಿ ಪರಿಹಾರ ಕಂಡುಕೊಳ್ಳುವಲ್ಲಿ ವಿಫಲವಾಗಿದೆ ಎಂದು ಆರೋಪಿಸಿದ ಅವರು, ಸರ್ಕಾರದ ಸಾಧನೆ ಶೂನ್ಯವಾಗಿದೆ ಎಂದು ಟೀಕಿಸಿದರು. "ಇದು ಜನಪ್ರಿಯ ಸರ್ಕಾರವಲ್ಲ, ಜಾಹೀರಾತು ಸರ್ಕಾರ. ಸರ್ಕಾರದ ಆಡಳಿತದ ಕುರಿತು ರಾಜ್ಯದ ಪ್ರತಿ ಮನೆಯಲ್ಲೂ ಅಸಮಾಧಾನ ವ್ಯಕ್ತವಾಗುತ್ತಿದೆ" ಎಂದು ವಾಗ್ದಾಳಿ ನಡೆಸಿದರು.

ಲಿಂಗಸುಗೂರಿನಿಂದ ಬಳ್ಳಾರಿವರೆಗೆ ಒಂಬತ್ತು ವಿಧಾನಸಭಾ ಕ್ಷೇತ್ರಗಳ ವ್ಯಾಪ್ತಿಯಲ್ಲಿ 10 ದಿನಗಳ ಕಾಲ ನಡೆಸಿದ ಪಾದಯಾತ್ರೆಯ ಸಂದರ್ಭದಲ್ಲಿ ದಲಿತರು, ಬಡವರು, ರೈತರು ಸೇರಿದಂತೆ ವಿವಿಧ ವರ್ಗಗಳ ಜನರನ್ನು ಭೇಟಿ ಮಾಡಿ ಅವರ ಸಮಸ್ಯೆಗಳನ್ನು ನೇರವಾಗಿ ಆಲಿಸಲಾಗಿದೆ. ಈ ಪಾದಯಾತ್ರೆ ತಮ್ಮ ಕಣ್ಣು ಹಾಗೂ ಹೃದಯವನ್ನು ತೆರೆಸಿದ ಅನುಭವ ನೀಡಿದೆ ಎಂದು ವಿಜಯೇಂದ್ರ ಹೇಳಿದರು.



ರಾಜ್ಯದಲ್ಲಿ ಬಡವರು, ದೀನದಲಿತರು ಮತ್ತು ತುಳಿತಕ್ಕೊಳಗಾದ ಸಮುದಾಯಗಳ ಸಮಸ್ಯೆಗಳು ಮುಂದುವರಿದಿವೆ. ಆದರೆ ಕಾಂಗ್ರೆಸ್ ಸರ್ಕಾರ ತನ್ನ ಎಲ್ಲ ಭರವಸೆಗಳನ್ನು ಈಡೇರಿಸಿದ್ದೇವೆ ಎಂದು ಹೇಳಿಕೊಳ್ಳುತ್ತಾ "ತನ್ನ ಬೆನ್ನನ್ನು ತಾನೇ ತಟ್ಟಿಕೊಳ್ಳುತ್ತಿದೆ" ಎಂದು ಅವರು ವ್ಯಂಗ್ಯವಾಡಿದರು. ಜನರ ನೈಜ ಸಮಸ್ಯೆಗಳಿಗೆ ಸ್ಪಂದಿಸುವ ಬದಲು ಸರ್ಕಾರ ಪ್ರಚಾರಕ್ಕೆ ಹೆಚ್ಚಿನ ಆದ್ಯತೆ ನೀಡುತ್ತಿದೆ ಎಂದು ಆರೋಪಿಸಿದರು.

ಕೇಂದ್ರ ಸರ್ಕಾರ ಸಂಪೂರ್ಣ ವಂದೇ ಮಾತರಂ ಗೀತೆಯನ್ನು ಹಾಡುವಂತೆ ಸೂಚಿಸಿದ್ದರೂ, ರಾಜ್ಯ ಸರ್ಕಾರ ಕೇವಲ ಎರಡು ಚರಣಗಳನ್ನು ಹಾಡುವಂತೆ ಆದೇಶಿಸಿದೆ ಎಂದು ವಿಜಯೇಂದ್ರ ಆರೋಪಿಸಿದರು. ಅಲ್ಪಸಂಖ್ಯಾತರ ಓಲೈಕೆಗಾಗಿ ವಂದೇ ಮಾತರಂ ಗೀತೆಯನ್ನು ಮೊಟಕುಗೊಳಿಸಲಾಗಿದೆ ಎಂದು ದೂರಿದ ಅವರು, ಈ ವಿಚಾರವಾಗಿ ಜನರಲ್ಲಿ ಆಕ್ರೋಶವಿದ್ದು, ಮುಂದಿನ ದಿನಗಳಲ್ಲಿ ಅದರ ಪರಿಣಾಮವನ್ನು ಕಾಂಗ್ರೆಸ್ ಎದುರಿಸಬೇಕಾಗುತ್ತದೆ ಎಂದರು.

ಮಹರ್ಷಿ ವಾಲ್ಮೀಕಿ ಅಭಿವೃದ್ಧಿ ನಿಗಮದಲ್ಲಿ ನಡೆದಿದೆ ಎನ್ನಲಾದ ₹187 ಕೋಟಿಗೂ ಅಧಿಕ ಅಕ್ರಮ ವಹಿವಾಟಿನ ಹಣವನ್ನು ವಾಪಸ್ ಪಡೆದು ದಲಿತರ ಅಭಿವೃದ್ಧಿಗೆ ಬಳಸಬೇಕು ಎಂದು ವಿಜಯೇಂದ್ರ ಒತ್ತಾಯಿಸಿದರು. ಎಸ್‌ಸಿಪಿ-ಟಿಎಸ್‌ಪಿ ಯೋಜನೆಯ ಸಾವಿರಾರು ಕೋಟಿ ರೂಪಾಯಿ ಅನುದಾನವನ್ನು ಕಾಂಗ್ರೆಸ್ ಸರ್ಕಾರ ಬೇರೆ ಯೋಜನೆಗಳಿಗೆ ಬಳಸಿಕೊಂಡಿದೆ ಎಂದು ಆರೋಪಿಸಿದರು.

ಹಿಂದಿನ ಬಿಜೆಪಿ ಸರ್ಕಾರದ ಅವಧಿಯಲ್ಲಿ ಎಸ್‌ಸಿ-ಎಸ್‌ಟಿ ಸಮುದಾಯಗಳ ಮೀಸಲಾತಿ ಪ್ರಮಾಣವನ್ನು ಹೆಚ್ಚಿಸಲಾಗಿತ್ತು. ಆದರೆ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ನಂತರ ಆ ಸಮುದಾಯಗಳಿಗೆ ದೊರೆಯಬೇಕಾದ ಮೀಸಲಾತಿ ಸೌಲಭ್ಯಗಳಿಗೆ ಕತ್ತರಿ ಹಾಕಲಾಗಿದೆ ಎಂದು ಅವರು ಆಕ್ರೋಶ ವ್ಯಕ್ತಪಡಿಸಿದರು.

ರಾಜ್ಯದ ದಲಿತರು, ರೈತರು, ಬಡವರು ಹಾಗೂ ಇತರ ಶೋಷಿತ ಸಮುದಾಯಗಳ ಸಮಸ್ಯೆಗಳನ್ನು ಮುಂದಿಟ್ಟುಕೊಂಡು ಸರ್ಕಾರದ ವಿರುದ್ಧ ಹೋರಾಟವನ್ನು ಮುಂದುವರಿಸಲಾಗುವುದು. ಜನರ ಸಮಸ್ಯೆಗಳಿಗೆ ಸ್ಪಂದಿಸದ ಸರ್ಕಾರದ ವಿರುದ್ಧ ಜನಜಾಗೃತಿ ಮೂಡಿಸುವ ಕಾರ್ಯವನ್ನು ಬಿಜೆಪಿ ಕೈಗೊಳ್ಳಲಿದೆ ಎಂದು ವಿಜಯೇಂದ್ರ ಹೇಳಿದರು.

## ಸಮಾಜದಲ್ಲಿ ಶಿಕ್ಷಕರ ಸ್ಥಾನ ಅತ್ಯಂತ ಮಹತ್ವದ್ದು: ಸೋಮನಗೌಡ ಬಾದರ್ಲಿ



ಸಿಂಧನೂರು: ಶಿಕ್ಷಕರಿಲ್ಲದ ಸಮಾಜವನ್ನು ಊಹಿಸುವುದೇ ಅಸಾಧ್ಯ. ಪ್ರತಿಯೊಬ್ಬರ ಜೀವನದಲ್ಲೂ ಒಂದು ಗುರಿ ಇರಬೇಕು, ಆ ಗುರಿ ಸಾಧಿಸಲು ಸೂಕ್ತ ಗುರುವಿನ ಮಾರ್ಗದರ್ಶನ ಅಗತ್ಯ. ನಾವು ಇಂದು ತಲುಪಿರುವ ಸ್ಥಾನಮಾನಕ್ಕೆ ಶಿಕ್ಷಕರ ಮಾರ್ಗದರ್ಶನವೇ ಪ್ರಮುಖ ಕಾರಣ ಎಂದು ಆರ್‌ಡಿಸಿಸಿ ನಿರ್ದೇಶಕ ಸೋಮನಗೌಡ ಬಾದರ್ಲಿ ಹೇಳಿದರು.

ನಗರದ ಟೌನ್‌ಹಾಲ್‌ನಲ್ಲಿ ಭಾರತರತ್ನ ಡಾ. ಸರ್ವಪಲ್ಲಿ ರಾಧಾಕೃಷ್ಣನ್ ಅವರ 139ನೇ ಜನ್ಮದಿನದ ಅಂಗವಾಗಿ ಆಯೋಜಿಸಿದ್ದ ತಾಲೂಕು ಮಟ್ಟದ ಶಿಕ್ಷಕರ ದಿನಾಚರಣೆ ಹಾಗೂ ನಿವೃತ್ತ ಶಿಕ್ಷಕರ ಸನ್ಮಾನ ಸಮಾರಂಭವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಕಾರ್ಯಕ್ರಮದ ಆರಂಭದಲ್ಲಿ ಡಾ. ಸರ್ವಪಲ್ಲಿ ರಾಧಾಕೃಷ್ಣನ್ ಹಾಗೂ ದೇಶದ ಪ್ರಥಮ ಮಹಿಳಾ ಶಿಕ್ಷಕಿ ಸಾವಿತ್ರಿಬಾಯಿ ಫುಲೆ ಅವರ ಭಾವಚಿತ್ರಗಳಿಗೆ ಗಣ್ಯರು ಪುಷ್ಪಾರ್ಚನೆ ಸಲ್ಲಿಸಿದರು.

ಪಿಕಾರ್ಡ್ ಬ್ಯಾಂಕ್ ಅಧ್ಯಕ್ಷ ಎಂ. ದೊಡ್ಡಬಸವರಾಜ ಹಾಗೂ ಕಾಂಗ್ರೆಸ್ ಮುಖಂಡ ರಾಜುಗೌಡ ಬಾದರ್ಲಿ ಮಾತನಾಡಿದರು. ವೈಜನಾಥ ಸಗರಮಠ ವಿಶೇಷ ಉಪನ್ಯಾಸ ನೀಡಿದರು.

ವೇದಿಕೆಯಲ್ಲಿ ಗ್ಯಾರಂಟಿ ಸಮಿತಿ ಅಧ್ಯಕ್ಷ ಅನಿಲ್ ಕುಮಾರ್ ವೈ., ಡಿವೈಎಸ್ಪಿ ಚಂದ್ರಶೇಖರ, ಸರ್ಕಾರಿ ನೌಕರರ ಸಂಘದ ತಾಲೂಕು ಅಧ್ಯಕ್ಷ ಚಂದ್ರಶೇಖರ ಹಿರೇಮಠ, ಕ್ಷೇತ್ರ ಶಿಕ್ಷಣಾಧಿಕಾರಿ ಚಾಗಪ್ಪ, ಅಕ್ಷರ ದಾಸೋಹ ಸಹಾಯಕ ನಿರ್ದೇಶಕ ಸಾಬಣ್ಣ ವರ್ಗ್ಗ್, ದೈಹಿಕ ಶಿಕ್ಷಣ ವಿಷಯ ಪರಿವೀಕ್ಷಕ ಸೋಮಲಿಂಗಪ್ಪ, ಕ್ಷೇತ್ರ ಸಮನ್ವಯಾಧಿಕಾರಿ ಬಸವರಾಜ ಆನೆಗುಂದಿ, ರಮಾದೇವಿ ಶಂಭೋಜಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

## ದಲಿತರ ಮೇಲಿನ ದೌರ್ಜನ್ಯ ಪ್ರಕರಣಗಳನ್ನು ಸಿಐಡಿ ತನಿಖೆಗೆ ವಹಿಸಲು ಸಿಪಿಐ(ಎಂ) ಆಗ್ರಹ



ರಾಯಚೂರು, ಸೆ.10: ಜಿಲ್ಲೆಯಲ್ಲಿ ಇತ್ತೀಚೆಗೆ ನಡೆದಿರುವ ದಲಿತರ ಮೇಲಿನ ಅತ್ಯಾಚಾರ ಹಾಗೂ ಕೊಲೆ ಪ್ರಕರಣಗಳನ್ನು ಸಿಐಡಿ ತನಿಖೆಗೆ ವಹಿಸಿ, ನಿಷ್ಪಕ್ಷಪಾತ ತನಿಖೆ ನಡೆಸಿ ತಪ್ಪಿತಸ್ಥರ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಭಾರತ ಕಮ್ಯೂನಿಸ್ಟ್ ಪಕ್ಷ (ಮಾರ್ಕ್ಸ್‌ವಾದಿ) ಸಿಪಿಐ(ಎಂ) ಜಿಲ್ಲಾ ಸಮಿತಿ ಒತ್ತಾಯಿಸಿದೆ.

ಸಿರವಾರ ತಾಲೂಕಿನ ಹೊಕ್ರಾಣಿ ಗ್ರಾಮದ ಅಶ್ವಿನಿ ಬಾಲಕಿಯ ಅತ್ಯಾಚಾರ ಮತ್ತು ಕೊಲೆ, ಲಿಂಗಸೂಗೂರು ತಾಲೂಕಿನ ಕರಡಕಲ್ ಗ್ರಾಮದ ರಾಣೇಮ್ಮ ಅವರ ಮೇಲಿನ ಸಾಮೂಹಿಕ ಅತ್ಯಾಚಾರ ಮತ್ತು ಕೊಲೆ ಹಾಗೂ ದೇವದುರ್ಗ ತಾಲೂಕಿನ ಹದ್ದಿನಾಳ ಗ್ರಾಮದ ಭೂಮನಂದ ಅವರ ಕೊಲೆ ಪ್ರಕರಣಗಳನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಬೇಕು ಎಂದು ಆಗ್ರಹಿಸಿ ಸೆ.10ರಂದು ಜಿಲ್ಲೆಯ ವಿವಿಧ ತಾಲೂಕು ಕೇಂದ್ರಗಳಲ್ಲಿ ಸಿಪಿಐ(ಎಂ) ವತಿಯಿಂದ ಪ್ರತಿಭಟನೆ ನಡೆಸಲಾಯಿತು.

ಒಂದೇ ತಿಂಗಳ ಅವಧಿಯಲ್ಲಿ ಪರಿಶಿಷ್ಟ ಸಮುದಾಯದವರ ಮೇಲೆ ಇಂತಹ ಗಂಭೀರ ದೌರ್ಜನ್ಯ ಪ್ರಕರಣಗಳು ನಡೆದಿರುವುದು ಆತಂಕಕಾರಿ. ಎಲ್ಲಾ ಪ್ರಕರಣಗಳನ್ನೂ ಸಿಐಡಿಗೆ ವಹಿಸಿ ಸಮಗ್ರ ತನಿಖೆ ನಡೆಸಬೇಕು. ದಲಿತರ ಮೇಲಿನ ದೌರ್ಜನ್ಯ ತಡೆಯಲು ಜಿಲ್ಲಾಡಳಿತ ಮತ್ತು ಪೊಲೀಸ್ ಇಲಾಖೆ ಪರಿಣಾಮಕಾರಿ ಕ್ರಮ ಕೈಗೊಳ್ಳಬೇಕು ಎಂದು ಪ್ರತಿಭಟನಾಕಾರರು ಒತ್ತಾಯಿಸಿದರು.

ಘಟನೆಗಳ ತಕ್ಷಣವೇ ಜಿಲ್ಲಾ ಉಸ್ತುವಾರಿ ಸಚಿವರು, ಸಮಾಜ ಕಲ್ಯಾಣ ಸಚಿವರು ಹಾಗೂ ಗೃಹ ಸಚಿವರು ಸಂತ್ರಸ್ತ ಕುಟುಂಬಗಳಿಗೆ ಭೇಟಿ ನೀಡಿ ಸಾಂತ್ವನ ಹೇಳಬೇಕಿತ್ತು. ಆದರೆ ಹೋರಾಟಗಳ ನಂತರ ಸಚಿವರು ಭೇಟಿ ನೀಡಿರುವುದು ವಿಷಾದನೀಯವಾಗಿದ್ದು, ಗೃಹ ಸಚಿವರು ಇದುವರೆಗೆ ಸಂತ್ರಸ್ತ ಕುಟುಂಬಗಳನ್ನು ಭೇಟಿ ಮಾಡದಿರುವುದು ಸರ್ಕಾರದ ಕಾಳಜಿಯ ಬಗ್ಗೆ ಪ್ರಶ್ನೆ ಮೂಡಿಸುತ್ತದೆ ಎಂದು ಸಿಪಿಐ(ಎಂ) ಮುಖಂಡರು ಟೀಕಿಸಿದರು.

ಸಂತ್ರಸ್ತ ಕುಟುಂಬಗಳಿಗೆ ತಲಾ ₹1 ಕೋಟಿ ಪರಿಹಾರ, ಕುಟುಂಬದ ಒಬ್ಬರಿಗೆ ಸರ್ಕಾರಿ ಉದ್ಯೋಗ ಹಾಗೂ 5 ಎಕರೆ ಜಮೀನು ನೀಡಬೇಕು. ಪ್ರತಿ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ದಲಿತರ ಕುಂದುಕೊರತೆ ಸಭೆಗಳನ್ನು ನಿಯಮಿತವಾಗಿ ನಡೆಸಬೇಕು, ಅಕ್ರಮ ಮದ್ಯ ಮಾರಾಟಕ್ಕೆ ಕಡಿವಾಣ ಹಾಕಬೇಕು, ಜಿಲ್ಲೆಯನ್ನು ಬಯಲು ಶೌಚಮುಕ್ತಗೊಳಿಸಲು ಕ್ರಮ ಕೈಗೊಳ್ಳಬೇಕು ಹಾಗೂ ಕಾನೂನು-ಸುವ್ಯವಸ್ಥೆ ಬಲಪಡಿಸಲು ಅಗತ್ಯ ಪೊಲೀಸ್ ಸಿಬ್ಬಂದಿ ಮತ್ತು ಮೂಲಸೌಕರ್ಯ ಒದಗಿಸಬೇಕು ಎಂದು ಆಗ್ರಹಿಸಿದರು.

ಪ್ರತಿಭಟನೆಯಲ್ಲಿ ಕೆ.ಜಿ. ವೀರೇಶ್, ಎಚ್. ಪದ್ಮಾ, ಕರಿಯಪ್ಪ ಅಚ್ಚೊಳಿ, ಡಿ.ಎಸ್. ಶರಣಬಸವ, ವರಲಕ್ಷ್ಮೀ, ಜಿಲಾನಿ ಪಾಷ, ನರಸಪ್ಪ, ರಂಗಪ್ಪ ಕೋರ್ತಕುಂದಾ, ಗೋಕಾರಮ್ಮ ಸೇರಿದಂತೆ ಹಲವರು ಭಾಗವಹಿಸಿದ್ದರು.

## ಅಪೇಕ್ಸ್ ಬ್ಯಾಂಕ್ ಉಪಾಧ್ಯಕ್ಷರಾಗಿ ಶರಣಗೌಡ ಪಾಟೀಲ್ ಬಯ್ಯಾಪುರ ಆಯ್ಕೆ



ಲಿಂಗಸುಗೂರು, ಸೆ.10: ಕರ್ನಾಟಕ ರಾಜ್ಯ ಅಪೇಕ್ಸ್ ಬ್ಯಾಂಕಿನ ಉಪಾಧ್ಯಕ್ಷರಾಗಿ ಶರಣಗೌಡ ಪಾಟೀಲ್ ಬಯ್ಯಾಪುರ ಅವರು ಅವಿರೋಧವಾಗಿ ಆಯ್ಕೆಯಾಗಿರುವ ಹಿನ್ನೆಲೆಯಲ್ಲಿ ಪಟ್ಟಣದಲ್ಲಿ ಅವರ ಅಭಿಮಾನಿಗಳು ಪಟಾಕಿ ಸಿಡಿಸಿ, ಸಿಹಿ ಹಂಚುವ ಮೂಲಕ ಸಂಭ್ರಮಾಚರಣೆ ನಡೆಸಿದರು.

ಪಟ್ಟಣದ ಗಡಿಯಾರ ಚೌಕ್, ಬಸ್‌ಸ್ಟ್ಯಾಂಡ್ ವೃತ್ತ ಹಾಗೂ ಬಸವಸಾಗರ ಕ್ರಾಸ್ ಸೇರಿದಂತೆ ವಿವಿಧೆಡೆ ಅಭಿಮಾನಿಗಳು ಜಮಾಯಿಸಿ ಶರಣಗೌಡ ಪಾಟೀಲ್ ಬಯ್ಯಾಪುರ ಅವರಿಗೆ ಅಭಿನಂದನೆ ಸಲ್ಲಿಸಿದರು.

ಅವರ ಆಯ್ಕೆಯಿಂದ ಸಹಕಾರ ಕ್ಷೇತ್ರಕ್ಕೆ ಮತ್ತಷ್ಟು ಬಲ ಸಿಗಲಿದ್ದು, ರೈತರು ಹಾಗೂ ಸಹಕಾರ ಸಂಘಗಳ ಅಭಿವೃದ್ಧಿಗೆ ಹೆಚ್ಚಿನ ಕೊಡುಗೆ ನೀಡಲಿ ಎಂದು ಅಭಿಮಾನಿಗಳು ಹಾರೈಸಿದರು.

ಈ ಸಂದರ್ಭದಲ್ಲಿ ಪಕ್ಷದ ಮುಖಂಡರು, ಕಾರ್ಯಕರ್ತರು ಹಾಗೂ ಶರಣಗೌಡ ಪಾಟೀಲ್ ಬಯ್ಯಾಪುರ ಅವರ ಅಭಿಮಾನಿಗಳು ಉಪಸ್ಥಿತರಿದ್ದರು.

## ದಲಿತರ ಮೇಲಿನ ಕೊಲೆ, ಅತ್ಯಾಚಾರ ಪ್ರಕರಣಗಳ ತನಿಖೆ ಸಿಐಡಿಗೆ ಒಪ್ಪಿಸಲು ಆಗ್ರಹ



ಸಿಂಧನೂರು: ಜಿಲ್ಲೆಯಲ್ಲಿ ದಲಿತರ ಮೇಲೆ ನಡೆದಿರುವ ಸರಣಿ ಕೊಲೆ ಹಾಗೂ ಅತ್ಯಾಚಾರ ಪ್ರಕರಣಗಳನ್ನು ಖಂಡಿಸಿ, ಪ್ರಕರಣಗಳ ತನಿಖೆಯನ್ನು ಸಿಐಡಿಗೆ ವಹಿಸಬೇಕು ಎಂದು ಸಿಪಿಐ(ಎಂಎಲ್) ಮುಖಂಡರು ಆಗ್ರಹಿಸಿದರು.

ಈ ಕುರಿತು ತಹಶೀಲ್ದಾರ್ ಮೂಲಕ ಗೃಹ ಸಚಿವರಿಗೆ ಮನವಿ ಸಲ್ಲಿಸಿದ ಅವರು, ಹದ್ದಿನಾಳ ಗ್ರಾಮದ ಭೂಮಾನಂದ ಕೊಲೆ ಹಾಗೂ ಹೊಕ್ರಾಣಿ ಗ್ರಾಮದ ಅಶ್ವಿನಿ ಕೊಲೆ ಪ್ರಕರಣಗಳು ಸೇರಿದಂತೆ ದಲಿತರ ಮೇಲಿನ ದೌರ್ಜನ್ಯ ಪ್ರಕರಣಗಳ ಕುರಿತು ಸಮಗ್ರ ಮತ್ತು ನಿಷ್ಪಕ್ಷಪಾತ ತನಿಖೆ ನಡೆಸಬೇಕು ಎಂದು ಒತ್ತಾಯಿಸಿದರು.

ಸಂತ್ರಸ್ತ ಕುಟುಂಬಗಳಿಗೆ ತಲಾ ₹1 ಕೋಟಿ ಪರಿಹಾರ ಹಾಗೂ 5 ಎಕರೆ ಜಮೀನು ನೀಡಬೇಕು. ಪ್ರತಿಯೊಂದು ಪೊಲೀಸ್ ಠಾಣೆಯಲ್ಲಿ ಮಾಸಿಕವಾಗಿ ದಲಿತರ ಕುಂದುಕೊರತೆ ಸಭೆ ನಡೆಸಿ ಸಮಸ್ಯೆಗಳಿಗೆ ಸ್ಪಂದಿಸಬೇಕು ಎಂದು ಮನವಿಯಲ್ಲಿ ಆಗ್ರಹಿಸಲಾಗಿದೆ.

ಇದರ ಜೊತೆಗೆ ಬಯಲು ಶೌಚಮುಕ್ತ ವ್ಯವಸ್ಥೆಗೆ ಅಗತ್ಯ ಶೌಚಾಲಯಗಳನ್ನು ನಿರ್ಮಿಸಬೇಕು ಹಾಗೂ ಅಕ್ರಮ ಮದ್ಯ ಮಾರಾಟವನ್ನು ಕಟ್ಟುನಿಟ್ಟಾಗಿ ತಡೆಗಟ್ಟಬೇಕು ಎಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಎಸ್. ದೇವೇಂದ್ರಗೌಡ, ಯಂಕಪ್ಪ ಕೆಂಗಲ್, ಹಳ್ಳಪ್ಪ, ಹನುಮೇಶ, ಗೇಸುರಾಜ, ಮಹೇಶ, ಗೋಪಾಲಕೃಷ್ಣ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

## ಬಲವಂತದ ಹಣ ವಸೂಲಿಗೆ ಕಡಿವಾಣ ಹಾಕಲು ಆಗ್ರಹ: ಜಿಲ್ಲಾಡಳಿತದ ವಿರುದ್ಧ ಅಸಮಾಧಾನ



ರಾಯಚೂರು, ಸೆ.10: ನಗರದ ವಿವಿಧೆಡೆ ಸಾರ್ವಜನಿಕರಿಂದ ಒತ್ತಾಯಪೂರ್ವಕವಾಗಿ ಹಣ ವಸೂಲಿ ಮಾಡುತ್ತಿರುವ ಕೃತ್ಯಗಳಿಗೆ ಕಡಿವಾಣ ಹಾಕಬೇಕು ಎಂದು ಲೋಕ ಜನಶಕ್ತಿ ಪಕ್ಷದ ಜಿಲ್ಲಾ ಅಧ್ಯಕ್ಷ ಬಂಗಿ ಮುನಿರೆಡ್ಡಿ ಆಗ್ರಹಿಸಿದ್ದಾರೆ.

ರಾಯಚೂರು ನಗರದಲ್ಲಿ ಮದುವೆ ಸಮಾರಂಭಗಳು, ದೇವಸ್ಥಾನಗಳು ಸೇರಿದಂತೆ ವಿವಿಧ ಕಾರ್ಯಕ್ರಮಗಳಿಗೆ ಗುಂಪುಗಳಾಗಿ ಆಗಮಿಸುವ ಕೆಲವರು ಹೆಚ್ಚಿನ ಮೊತ್ತದ ಹಣ ನೀಡುವಂತೆ ಒತ್ತಾಯಿಸುತ್ತಿದ್ದಾರೆ. ಹಣ ನೀಡಲು ನಿರಾಕರಿಸಿದ ಸಂದರ್ಭದಲ್ಲಿ ಗಲಾಟೆ ಮಾಡುವುದು, ನಿಂದಿಸುವುದು ಹಾಗೂ ಅಸಭ್ಯವಾಗಿ ವರ್ತಿಸುವ ಮೂಲಕ ಮದುವೆ ಕಾರ್ಯಕ್ರಮಕ್ಕೆ ಬಂದಿರುವ ವಧು-ವರರು ಮತ್ತು ಅವರ ಕುಟುಂಬದವರನ್ನು ಮುಜುಗರಕ್ಕೀಡು ಮಾಡಲಾಗುತ್ತಿದೆ ಎಂಬ ಆರೋಪಗಳು ಕೇಳಿಬರುತ್ತಿವೆ.

ಮದುವೆ ಕಾರ್ಯಕ್ರಮಗಳಲ್ಲಿ ಕೆಲವರು ₹10 ಸಾವಿರದಿಂದ ₹50 ಸಾವಿರದವರೆಗೆ ಹಣ ನೀಡುವಂತೆ ಒತ್ತಾಯಿಸುತ್ತಿದ್ದು, ಕೇಳಿದಷ್ಟು ಹಣ ನೀಡದಿದ್ದರೆ ಕಾರ್ಯಕ್ರಮದ ಮಧ್ಯೆಯೇ ಗಲಾಟೆ ಮಾಡಿ ಹಣ ವಸೂಲಿ ಮಾಡುತ್ತಿದ್ದಾರೆ ಎಂದು ಸಾರ್ವಜನಿಕರು ಆರೋಪಿಸಿದ್ದಾರೆ. ಇದರಿಂದ ಮದುವೆ ಸಮಾರಂಭಗಳಿಗೆ ಆಗಮಿಸುವ ಕುಟುಂಬಸ್ಥರು ಹಾಗೂ ಸಂಬಂಧಿಕರು ಮುಜುಗರ ಮತ್ತು ಮಾನಸಿಕ ತೊಂದರೆ ಅನುಭವಿಸುವಂತಾಗಿದೆ ಎಂದು ಅವರು ತಿಳಿಸಿದ್ದಾರೆ.

ನಗರದ ಬಸ್ ನಿಲ್ದಾಣ, ರೈಲು ನಿಲ್ದಾಣ ಹಾಗೂ ಇತರ ಸಾರ್ವಜನಿಕ ಸ್ಥಳಗಳಲ್ಲಿಯೂ ಇದೇ ರೀತಿಯ ಒತ್ತಾಯಪೂರ್ವಕ ಹಣ ವಸೂಲಿ ನಡೆಯುತ್ತಿದೆ ಎಂಬ ದೂರುಗಳಿವೆ. ಇತ್ತೀಚಿನ ದಿನಗಳಲ್ಲಿ ನಗರದ ವಿವಿಧ ವೃತ್ತಗಳಲ್ಲಿ ವಾಹನಗಳನ್ನು ಅಡ್ಡಗಟ್ಟಿ ಚಪ್ಪಾಳೆ ತಟ್ಟಿ ಹಣ ಕೇಳುತ್ತಿರುವ ಘಟನೆಗಳು ಹೆಚ್ಚಾಗಿದ್ದು, ಸಾರ್ವಜನಿಕರು ನೀಡಲು ಇಚ್ಛಿಸುವ ಮೊತ್ತವನ್ನು ಸ್ವೀಕರಿಸದೆ ತಮಗೆ ಬೇಕಾದಷ್ಟು ಹಣ ನೀಡುವಂತೆ ಒತ್ತಾಯಿಸಲಾಗುತ್ತಿದೆ. ಹಣ ನೀಡಿದ ಬಳಿಕವಷ್ಟೇ ವಾಹನಗಳನ್ನು ಮುಂದೆ ಬಿಡುತ್ತಿರುವುದರಿಂದ ಸಂಚಾರ ದಟ್ಟಣೆ ಉಂಟಾಗುವುದರ ಜೊತೆಗೆ ಅಪಘಾತಗಳ ಸಂಭವವೂ ಹೆಚ್ಚಾಗಿದೆ ಎಂದು ಮುನಿರೆಡ್ಡಿ ಹೇಳಿದ್ದಾರೆ.

ಕೆಲವರು ಈ ರೀತಿಯ ಹಣ ವಸೂಲಿ ಕಾರ್ಯದಲ್ಲಿ ಇತರರನ್ನು ಬಳಸಿಕೊಂಡು ಸಾರ್ವಜನಿಕರಿಂದ ಹಣ ಸಂಗ್ರಹಿಸುತ್ತಿದ್ದಾರೆ ಎಂಬ ಆರೋಪಗಳೂ ಕೇಳಿಬರುತ್ತಿವೆ. ಸಾರ್ವಜನಿಕ ಸ್ಥಳಗಳಲ್ಲಿ ಬಲವಂತದ ಹಣ ವಸೂಲಿ ನಡೆಯುತ್ತಿದ್ದರೂ ಪೊಲೀಸ್ ಇಲಾಖೆ ಹಾಗೂ ಸಂಚಾರ ಪೊಲೀಸರು ಸೂಕ್ತ ಕ್ರಮ ಕೈಗೊಳ್ಳುತ್ತಿಲ್ಲ ಎಂಬ ಅಸಮಾಧಾನ ಸಾರ್ವಜನಿಕರಲ್ಲಿ ವ್ಯಕ್ತವಾಗುತ್ತಿದೆ.

ಈ ಹಿನ್ನೆಲೆಯಲ್ಲಿ ಜಿಲ್ಲಾಧಿಕಾರಿ, ಪೊಲೀಸ್ ಇಲಾಖೆ, ಸಂಚಾರ ಪೊಲೀಸರು ಹಾಗೂ ಮಹಾನಗರ ಪಾಲಿಕೆ ಅಧಿಕಾರಿಗಳು ಕೂಡಲೇ ಗಮನಹರಿಸಿ ಸಾರ್ವಜನಿಕರಿಗೆ ತೊಂದರೆಯಾಗದಂತೆ ಸೂಕ್ತ ಕ್ರಮ ಕೈಗೊಳ್ಳಬೇಕು. ಮದುವೆ ಮಂಟಪಗಳು, ದೇವಸ್ಥಾನಗಳು ಹಾಗೂ ಸಾರ್ವಜನಿಕ ಸ್ಥಳಗಳಲ್ಲಿ ಬಲವಂತದ ಹಣ ವಸೂಲಿ ಮತ್ತು ವಾಹನಗಳನ್ನು ಅಡ್ಡಗಟ್ಟುವ ಪ್ರಕರಣಗಳಿಗೆ ಕಡಿವಾಣ ಹಾಕಿ, ಕಾನೂನುಬದ್ಧವಾಗಿ ಕ್ರಮ ಕೈಗೊಳ್ಳುವ ಮೂಲಕ ಸಾರ್ವಜನಿಕರಿಗೆ ರಕ್ಷಣೆ ಒದಗಿಸಬೇಕು ಎಂದು ಬಂಗಿ ಮುನಿರೆಡ್ಡಿ ಒತ್ತಾಯಿಸಿದ್ದಾರೆ.

## ಸೆಮಿಕಂಡಕ್ಟರ್ ತಂತ್ರಜ್ಞಾನ, ಸ್ಪರ್ಧಾತ್ಮಕ ಪರೀಕ್ಷೆ ಕುರಿತು ಮಾರ್ಗದರ್ಶನ



ರಾಯಚೂರು, ಸೆ.10: ನಗರದ ಸರ್ಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜಿನಲ್ಲಿ ಆಂತರಿಕ ಗುಣಮಟ್ಟ ಭರವಸೆ ಕೋಶ (ಐಕ್ಯೂಎಸಿ)ದ ಅಡಿಯಲ್ಲಿ ವಿಶೇಷ ಉಪನ್ಯಾಸ ಸರಣಿ ಕಾರ್ಯಕ್ರಮ ಹಮ್ಮಿಕೊಳ್ಳಲಾಯಿತು.

ಸಂಪನ್ಮೂಲ ವ್ಯಕ್ತಿಯಾಗಿ ಆಗಮಿಸಿದ್ದ ರಾಯಚೂರು ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಭೌತಶಾಸ್ತ್ರ ವಿಭಾಗದ ಸಹಾಯಕ ಪ್ರಾಧ್ಯಾಪಕಿ ಡಾ. ವಿಜಯಶ್ರೀ ಪಾಟೀಲ್ ಎನ್. ಅವರು "Recent Trends and Future Trends in Semiconductor Technology" ವಿಷಯ ಕುರಿತು ಉಪನ್ಯಾಸ ನೀಡಿದರು.

ಸೆಮಿಕಂಡಕ್ಟರ್ ತಂತ್ರಜ್ಞಾನದಲ್ಲಿನ ಇತ್ತೀಚಿನ ಬೆಳವಣಿಗೆಗಳು ಹಾಗೂ ವಿವಿಧ ಕ್ಷೇತ್ರಗಳಲ್ಲಿ ಅದರ ಬಳಕೆಯ ಕುರಿತು ವಿದ್ಯಾರ್ಥಿನಿಯರಿಗೆ ಮಾಹಿತಿ ನೀಡಿದ ಅವರು, ಚಿಪ್ ತಯಾರಿಕೆ, ಕೃತಕ ಬುದ್ಧಿಮತ್ತೆ, ವಿದ್ಯುತ್ ವಾಹನಗಳು ಹಾಗೂ ಉನ್ನತ ಕಾರ್ಯಕ್ಷಮತೆಯ ಕಂಪ್ಯೂಟಿಂಗ್ ಕ್ಷೇತ್ರಗಳಲ್ಲಿ ಲಭ್ಯವಿರುವ ಸಂಶೋಧನೆ, ಉದ್ಯೋಗ ಮತ್ತು ವೃತ್ತಿ ಅವಕಾಶಗಳ ಕುರಿತು ಮಾರ್ಗದರ್ಶನ ನೀಡಿದರು.

ಮತ್ತೊಬ್ಬ ಸಂಪನ್ಮೂಲ ವ್ಯಕ್ತಿಯಾಗಿ ಭಾಗವಹಿಸಿದ್ದ ಎಲ್.ವಿ.ಡಿ. ಕಾಲೇಜಿನ ಗಣಿತಶಾಸ್ತ್ರ ವಿಭಾಗದ ಸಹಾಯಕ ಪ್ರಾಧ್ಯಾಪಕ ಹುಸೇನಪ್ಪ ಅವರು "Spardha Pariksha: Pathway to Competitive Success" ವಿಷಯ ಕುರಿತು ಮಾತನಾಡಿ, ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿ ಯಶಸ್ಸು ಸಾಧಿಸಲು ಸ್ಪಷ್ಟ ಗುರಿ, ಶಿಸ್ತುಬದ್ಧ ಅಧ್ಯಯನ ಮತ್ತು ನಿರಂತರ ಪರಿಶ್ರಮ ಅಗತ್ಯ ಎಂದರು. ಪರೀಕ್ಷೆಗಳ ಸ್ವರೂಪ, ಸಿದ್ಧತಾ ವಿಧಾನ, ಸಮಯ ನಿರ್ವಹಣೆ, ಅಧ್ಯಯನ ಯೋಜನೆ ಹಾಗೂ ಸೂಕ್ತ ಅಧ್ಯಯನ ಸಾಮಗ್ರಿಗಳ ಆಯ್ಕೆ ಕುರಿತು ಮಾಹಿತಿ ನೀಡಿದರು.

ಅಧ್ಯಕ್ಷತೆ ವಹಿಸಿದ್ದ ಪ್ರಾಂಶುಪಾಲೆ ಡಾ. ಸುಗುಣ ಬಸವರಾಜ ಮಾತನಾಡಿ, ಕಾಲೇಜುಗಳಲ್ಲಿ ಇಂತಹ ವಿಶೇಷ ಉಪನ್ಯಾಸ ಕಾರ್ಯಕ್ರಮಗಳು ವಿದ್ಯಾರ್ಥಿಗಳ ಜ್ಞಾನ ವಿಸ್ತರಣೆಗೆ ಸಹಕಾರಿಯಾಗುತ್ತವೆ. ವಿದ್ಯಾರ್ಥಿನಿಯರು ತಮ್ಮ ಕಲಿಕೆಯನ್ನು ತರಗತಿಗೆ ಮಾತ್ರ ಸೀಮಿತಗೊಳಿಸದೆ ವಿವಿಧ ಕ್ಷೇತ್ರಗಳ ಜ್ಞಾನವನ್ನು ಪಡೆದುಕೊಳ್ಳಬೇಕು ಎಂದು ಸಲಹೆ ನೀಡಿದರು.

ಐಕ್ಯೂಎಸಿ ಸಂಚಾಲಕಿ ಹಾಗೂ ಭೌತಶಾಸ್ತ್ರ ವಿಭಾಗದ ಸಹ ಪ್ರಾಧ್ಯಾಪಕಿ ಡಾ. ಜ್ಯೋತಿ ಸಿ.ಕೆ. ಪ್ರಾಸ್ತಾವಿಕವಾಗಿ ಮಾತನಾಡಿದರು. ಸಹಾಯಕ ಪ್ರಾಧ್ಯಾಪಕಿ ಸರಸ್ವತಿ ಅವರು ಡಾ. ವಿಜಯಶ್ರೀ ಪಾಟೀಲ್ ಅವರನ್ನು ಪರಿಚಯಿಸಿದರು. ಗಣಿತಶಾಸ್ತ್ರ ವಿಭಾಗದ ಸಹ ಪ್ರಾಧ್ಯಾಪಕಿ ಡಾ. ಸೈಯಿದಾ ರಷೀದಾ ಪರವಿನ್ ಅವರು ಹುಸೇನಪ್ಪ ಅವರನ್ನು ಪರಿಚಯಿಸಿದರು. ಐಕ್ಯೂಎಸಿ ಸಹ ಸಂಚಾಲಕ ಹಾಗೂ ಗಣಕವಿಜ್ಞಾನ ವಿಭಾಗದ ಸಹಾಯಕ ಪ್ರಾಧ್ಯಾಪಕ ಶರಣಗೌಡ ಕೆ. ವೇದಿಕೆಯಲ್ಲಿ ಉಪಸ್ಥಿತರಿದ್ದರು.

ಸಹ ಪ್ರಾಧ್ಯಾಪಕರಾದ ಡಾ. ಸ್ವರೂಪರಾಣಿ, ಡಾ. ಉಮಾದೇವಿ, ಸುಮಿತ್ರಾ ಪ್ಯಾಟಿ, ಶ್ರೀರಂಗನಾಥ ಬಿಲ್ಲಾರ್, ಸಹಾಯಕ ಪ್ರಾಧ್ಯಾಪಕರಾದ ಡಾ. ಸಂತೋಷಕುಮಾರ, ಡಾ. ಚನ್ನಬಸವ, ಡಾ. ಅಸ್ಮಾ, ದೈಹಿಕ ಶಿಕ್ಷಣ ನಿರ್ದೇಶಕ ಡಾ. ಪ್ರಸನ್ನಕುಮಾರ, ಗ್ರಂಥಪಾಲಕ ಡಾ. ಸುರೇಶ ಪಾಟೀಲ್ ಹಾಗೂ ಅತಿಥಿ ಉಪನ್ಯಾಸಕರು ಉಪಸ್ಥಿತರಿದ್ದರು.

ಬಿ.ಎಸ್‌ಸಿ. ಐದನೇ ಸೆಮಿಸ್ಟರ್ ವಿದ್ಯಾರ್ಥಿನಿ ಸಾನಿಯಾ ಕಾರ್ಯಕ್ರಮ ನಿರೂಪಿಸಿದರು. ಮೂರನೇ ಸೆಮಿಸ್ಟರ್ ವಿದ್ಯಾರ್ಥಿನಿ ಕಾವೇರಿ ಅತಿಥಿಗಳನ್ನು ಸ್ವಾಗತಿಸಿದರು. ಐದನೇ ಸೆಮಿಸ್ಟರ್ ವಿದ್ಯಾರ್ಥಿನಿ ಸಂಜನಾ ಪ್ರಾರ್ಥಿಸಿದರು. ನಂದಿನಿ ವಂದಿಸಿದರು. ಹೆಚ್ಚಿನ ಸಂಖ್ಯೆಯಲ್ಲಿ ವಿದ್ಯಾರ್ಥಿನಿಯರು ಭಾಗವಹಿಸಿದ್ದರು.

## ಪರಿಸರ ಸ್ನೇಹಿ ಗಣಪತಿ ತಯಾರಿಕೆ ಕಾರ್ಯಾಗಾರ




ರಾಯಚೂರು, ಸೆ.10: ಪರಿಸರ ಸಂರಕ್ಷಣೆ ಹಾಗೂ ಪರಿಸರ ಸ್ನೇಹಿ ಆಚರಣೆಗಳ ಕುರಿತು ವಿದ್ಯಾರ್ಥಿಗಳು ಮತ್ತು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವ ಉದ್ದೇಶದಿಂದ ಇಎಂಪಿಆರ್‌ಐ ಹಾಗೂ ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್ ಕರ್ನಾಟಕ, ಜಿಲ್ಲಾ ಸಂಸ್ಥೆ ರಾಯಚೂರು ವತಿಯಿಂದ ಪರಿಸರ ಸ್ನೇಹಿ ಗಣಪತಿ ತಯಾರಿಕೆ ಕಾರ್ಯಾಗಾರ ಆಯೋಜಿಸಲಾಯಿತು.

ನಗರದ ಜಿಲ್ಲಾ ಸ್ಕೌಟ್ ಭವನದಲ್ಲಿ ಸೆ.9ರಂದು ಜಿಲ್ಲಾ ಮಟ್ಟದ ಪರಿಸರ ಶಿಕ್ಷಣ ಕಾರ್ಯಕ್ರಮದಡಿ ನಡೆದ ಕಾರ್ಯಾಗಾರಕ್ಕೆ ಜಿಲ್ಲಾ ಮುಖ್ಯ ಆಯುಕ್ತ ಬಸವರಾಜ ಬೋರೆಡ್ಡಿ ಅಧ್ಯಕ್ಷತೆ ವಹಿಸಿದ್ದರು. ಜಿಲ್ಲಾ ಕಾರ್ಯದರ್ಶಿ ಗದ್ದಿ ಬಸಪ್ಪ ಸ್ವಾಗತಿಸಿದರು. ರಾಯಚೂರು ಉಪನಿರ್ದೇಶಕ (ಆ) ಮಲ್ಲಿಕಾರ್ಜುನ ಅವರು ಸಸಿಗೆ ನೀರು ಹಾಕುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.

ಇಎಂಪಿಆರ್‌ಐ ಕಾರ್ಯಕ್ರಮ ಸಂಯೋಜಕಿ ಬೃಂದಾ ಅವರು ಆನ್‌ಲೈನ್ ಮೂಲಕ ಪರಿಸರ ಶಿಕ್ಷಣ ಕಾರ್ಯಕ್ರಮ, ಪರಿಸರ ಸ್ನೇಹಿ ಗಣಪತಿ ತಯಾರಿಕೆಯ ಅಗತ್ಯತೆ ಹಾಗೂ ಇಕೋ ಕ್ಲಬ್‌ಗಳ ಮಹತ್ವ ಕುರಿತು ದಳನಾಯಕರು ಮತ್ತು ಶಿಕ್ಷಕರಿಗೆ ಮಾಹಿತಿ ನೀಡಿದರು.

ದೇವದುರ್ಗದ ಸಂಪನ್ಮೂಲ ವ್ಯಕ್ತಿ ಮಲ್ಲಪ್ಪ ಕುಂಬಾರ ಅವರು ನೈಸರ್ಗಿಕ ಮಣ್ಣಿನಿಂದ ಗಣಪತಿ ಮೂರ್ತಿಗಳನ್ನು ತಯಾರಿಸುವ ವಿಧಾನವನ್ನು ಪ್ರಾತ್ಯಕ್ಷಿಕೆ ಮೂಲಕ ತಿಳಿಸಿದರು. ಪ್ಲಾಸ್ಟರ್ ಆಫ್ ಪ್ಯಾರಿಸ್ ಸೇರಿದಂತೆ ಪರಿಸರಕ್ಕೆ ಹಾನಿಕಾರಕ ವಸ್ತುಗಳ ಬಳಕೆಯನ್ನು ಕಡಿಮೆ ಮಾಡಿ, ನೈಸರ್ಗಿಕ ಮಣ್ಣಿನ ಮೂರ್ತಿಗಳಿಗೆ ಆದ್ಯತೆ ನೀಡಬೇಕು ಎಂದು ತಿಳಿಸಿದರು.

ಕಾರ್ಯಾಗಾರದಲ್ಲಿ ಉಪಾಧ್ಯಕ್ಷೆ ದಾನಮ್ಮ, ಆರ್. ಇಂದಿರಾ, ಸಹಾಯಕ ಜಿಲ್ಲಾ ಆಯುಕ್ತರಾದ ರಾಮಚಂದ್ರಪ್ಪ ಶಿವಂಗಿ, ಮಲ್ಲಯ್ಯ ಕಲ್ಲೂರು, ಕಾರ್ಯದರ್ಶಿಗಳಾದ ಶರಣಪ್ಪ ಲಿಂಗಸುಗೂರು, ಬೀರಪ್ಪ ಶಂಭೋಜಿ ಸಿಂಧನೂರು, ಶಿವಪ್ಪ ಹಸಮಕಲ್ ಮಸ್ಕಿ ಸೇರಿದಂತೆ ಹಲವರು ಉಪಸ್ಥಿತರಿದ್ದರು. ಕಬ್ ಮಾಸ್ಟರ್, ಫ್ಲಾಕ್ ಲೀಡರ್, ಸ್ಕೌಟ್ ಮಾಸ್ಟರ್, ಗೈಡ್ ಕ್ಯಾಪ್ಟನ್ ಹಾಗೂ ಶಿಕ್ಷಕ-ಶಿಕ್ಷಕಿಯರು ಸೇರಿ ಒಟ್ಟು 62 ಮಂದಿ ಭಾಗವಹಿಸಿದ್ದರು.

ರೋವರ್ ಸ್ಕೌಟ್ ಲೀಡರ್ ಹಾಗೂ ಯುವ ಸಮಿತಿ ಕಾರ್ಯದರ್ಶಿ ವೈ. ನರಸಿಂಹ, ಸೋಮಶೇಖರ ರೋವರ್, ಜಂಟಿ ಕಾರ್ಯದರ್ಶಿ ಕಿರಣ್ ಕುಮಾರ್ ರೋವರ್ ಹಾಗೂ ಸದಸ್ಯ ವಿಶ್ವನಾಥ ರೆಡ್ಡಿ ಸ್ವಯಂಸೇವಕರಾಗಿ ಸೇವೆ ಸಲ್ಲಿಸಿದರು. ಜಿಲ್ಲಾ ಸಂಘಟಕ ಅಂಬಣ್ಣ ನಾಯಕ ಕಾರ್ಯಾಗಾರವನ್ನು ಸಂಘಟಿಸಿದರು.

Printed By and Published By Tunga Bimba Printers & Publishers 4-4-401/94, Gulbraga Builders Layout, Opp Navodaya Hospital, Yeragera Road, Raichur-584103. Editor: Gururaja.K